ಸುದ್ದಿ ಸಿಂಚನ

ಇಂದು ಭೋವಿ ಅಭಿವೃದ್ಧಿ ನಿಗಮ ಅಧ್ಯಕ್ಷರ ಪ್ರವಾಸ

ಹಾಸನ: ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ ಎಂ ಅವರು ಮೇ 8ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಮಾಡಲಿರುವರು. ಬೆಳಗ್ಗೆ 10.30ಕ್ಕೆ ಹಾಸನ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಮತ್ತು ಭೋವಿ ಸಮುದಾಯದ ಮುಖಂಡರೊಂದಿಗೆ ಸಭೆ ನಡೆಸಲಿದ್ದಾರೆ, ಅಂದು ಮಧ್ಯಾಹ್ನ 3 ಗಂಟೆಗೆ ಆಲೂರು ತಾಲೂಕು, ಕೆಂಚಮ್ಮ ಹೊಸಕೋಟೆ ಹೋಬಳಿ ಜಯಂತಿ ನಗರಕ್ಕೆ ಭೇಟಿ ನೀಡುವರು. ನಂತರ ಮೈಸೂರಿಗೆ ತೆರಳಲಿದ್ದಾರೆ.

10ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಹಾಸನ: ಬೇಲೂರು ಉಪ ವಿಭಾಗದ ತೊಳಲು ಶಾಖೆಯ ಈ-2 ಗೆಂಡೆಹಳ್ಳಿ ಫೀಡರ್ ವ್ಯಾಪ್ತಿಯಲ್ಲಿ ಹೆಚ್ಚುವರಿ ಮಾರ್ಗವನ್ನು ವಿಸ್ತರಿಸುವ ಕಾರ್ಯ ನಡೆಯಲಿದೆ. ಈ ಹಿನ್ನೆಲೆ ಮೇ 10ರಂದು ಬೆಳಗ್ಗೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯ ವರೆಗೆ ಬೇಲೂರು ಉಪ ವಿಭಾಗದ ತೊಳಲು ಶಾಖಾ ವ್ಯಾಪ್ತಿಯ ಗೆಂಡೆ ಹಳ್ಳಿ ವಿವಿ ಕೇಂದ್ರದಿಂದ ಹೊರ ಹೊಮ್ಮುವ ಪೂರಕವಾದ ಈ-2 ಗೆಂಡೆಹಳ್ಳಿ ಪೂರಕದ ಮಾರ್ಗ ಮುಕ್ತತೆ ಪಡೆದುಕೊಳ್ಳುತ್ತಿರುವುದರಿಂದ ಸದರಿ ಪೂರಕದಿಂದ ವಿದ್ಯುತ್ ಸರಬರಾಜು ಆಗುವ ಯಮಸಂಧಿ, ವಾಗಿನಕೆರೆ, ಕೂಡೂರು, ಚೋಕನಹಳ್ಳಿ, ಅಗಸರಹಳ್ಳಿ, ಕಲ್ಲಹಳ್ಳಿ, ಬಿ. ಸೋಮನಹಳ್ಳಿ ಮತ್ತು ಮರೂರು ಇಂಡಸ್ಟ್ರಿಯಲ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

11ರಂದು ಬುಡಕಟ್ಟುಗಳ ಆಯೋಗದ ಅಧ್ಯಕ್ಷರು, ಸದಸ್ಯರ ಪ್ರವಾಸ

ಹಾಸನ: ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧ್ಯಕ್ಷರಾದ ಡಾ. ಮೂರ್ತಿ ಎಲ್ ಹಾಗೂ ಸದಸ್ಯರಾದ ಎಂ. ಕುಂಬಯ್ಯ, ಸುನೀಲ್ ಎಂ ಉಕ್ಕಲಿ, ಎನ್. ದಿವಾಕರ್, ಮತ್ತು ಗೀತಾ ಥಾಂವಶಿ ಹಾಗೂ ಕಾರ್ಯದರ್ಶಿಗಳಾದ ಡಾ. ಎಚ್. ಎಸ್ ಶಿವರಾಮು ಅವರು ಮೇ.11 ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಮಾಡಲಿರುವರು.
ಅಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳು, ಪೊಲೀಸ್ ಅಧೀಕ್ಷಕರು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸಂಘ ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸಭೆ, ಅಹವಾಲು ಸ್ವೀಕಾರ ಹಾಗೂ ಕುಂದುಕೊರತೆ ಸಭೆ ನಡೆಸಲಿದ್ದಾರೆ, ಮಧ್ಯಾಹ್ನ 2.15ಕ್ಕೆ ಪತ್ರಿಕಾಗೋಷ್ಠಿಯನ್ನು ನಡೆಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳೊಂದಿಗೆ ಎಸ್‌ಸಿಪಿ, ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ನಡೆಸಲಿದ್ದಾರೆ, ರಾತ್ರಿ 7 ಗಂಟೆಗೆ ಬೆಂಗಳೂರಿಗೆ ರಸ್ತೆ ಮೂಲಕ ತೆರಳಲಿದ್ದಾರೆ.

ಟ್ರ್ಯಾಕ್ಟರ್‌ನ ಟ್ರಾಲಿ ಪಲ್ಟಿ

ರಾಮನಾಥಪುರ: ಇಲ್ಲಿಯ ಬಸವೇಶ್ವರ ವೃತ್ತದಲ್ಲಿ ರಾಮನಾಥಪುರದ ತಂಬಾಕು ಹರಾಜು ಮಾರುಕಟ್ಟೆಗೆ ಟ್ರ್ಯಾಕ್ಟರ್‌ನಲ್ಲಿ ತಂಬಾಕು ಬೇಲ್‌ಗಳನ್ನು ತೆಗೆದುಕೊಂಡು ಹೋಗುತ್ತಿದ್ದ ಸಂದರ್ಭದಲ್ಲಿ ಟ್ರ್ಯಾಕ್ಟರ್‌ನ ಟ್ರಾಲಿ ಕಳಚಿಕೊಂಡು ಪಲ್ಟಿಯಾಗಿದೆ.
ರಾಮನಾಥಪುರದ ಶ್ರೀ ಸುಬ್ರಹ್ಮಣ್ಯ ನಗರದ ತಂಬಾಕು ಹರಾಜು ಮಾರುಕಟ್ಟೆಗೆ ನೇರಳೆ ಗ್ರಾಮದ ರೈತ ತಂಬಾಕು ಬೇಲ್‌ಗಳನ್ನು ತೆಗೆದುಕೊಂಡು ಹೋಗುವ ಸಂದರ್ಭದಲ್ಲಿ ಅವಗಡವಾಗಿದೆ.
ಇದರಿಂದ ಯಾರಿಗೂ ಯಾವುದೇ ತೊಂದರೆಯಾಗದೇ ಪಾರಾಗಿದ್ದಾರೆ. ರಾಮನಾಥಪುರ ಪಟ್ಟಣ ಬೆಳವಣಿಗೆ ಹೊಂದಿದ್ದು, ಜನಸಂಖ್ಯೆ ಕೂಡ ಏರುಗತಿಯಲ್ಲಿದೆ. ಸಾಲದಕ್ಕೆ ಈ ರಸ್ತೆ, ಕೇರಳ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ, ಮೈಸೂರು, ಪಿರಿಯಪಟ್ಟಣ ಹಾಸನ ಪ್ರದೇಶಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ಮಾರ್ಗವಾದ್ದು, ಜನನಿಬಿಡ ರಸ್ತೆಯಲ್ಲಿ ನಿತ್ಯ ಸಾವಿರಾರು ವಾಹನಗಳು ಓಡಾಡುತ್ತಿವೆ. ಇದರಿಂದಾಗಿ ಸರ್ವಜನಿಕರ ಓಡಾಟಕ್ಕೆ ಡಿವೈಡರ್, ಪಾದಚಾರಿ ರಸ್ತೆ ಇಲ್ಲದೇ ಪರದಾಡುವಂತಾಗದೆ. ಮುಖ್ಯವಾಗಿ ಬಸವೇಶ್ವರ ವೃತ್ತದಿಂದ ರಾಜ್ಯ ಹೆದ್ದಾರಿ ಮಾರ್ಗದಲ್ಲಿ ವೈಜಾನಿಕವಾಗಿ ಚರಂಡಿ, ರಸ್ತೆಗೆ ಮೂರು ಮುಖ್ಯ ರಸ್ತೆಗೆ ಹಂಪ್ ಮತ್ತು ಪಾದಚಾರಿ ಮಾರ್ಗ ಇಲ್ಲದೇ ಪಟ್ಟಣದ ಅಂದಕ್ಕೂ ಮಾರಕವಾಗಿದೆ. ಕೆಆರ್‌ಡಿಸಿಎಲ್ ನವರು ಹಾಗೂ ಸ್ಥಳೀಯ ಅಧಿಕಾರಿಗಳು ಸಮಸ್ಯೆ ಬಗೆಹರಿಸಬೇಕೆಂದು ಸಮಾಜ ಸೇವಕರಾದ ಜನತಾಹೌಸ್ ಜಯರಾಮ್ ಒತ್ತಾಯಿಸಿದ್ದಾರೆ.

ಶ್ರೀರಂಗಪಟ್ಟಣ: ರೈಲಿಗೆ ಸಿಕ್ಕಿ ಅಪರಿಚಿತ ವ್ಯಕ್ತಿ ಸಾವು

ಮೈಸೂರು: ಮಂಡ್ಯ ಜಿಲ್ಲೆ ಶ್ರೀರಂಗ ಪಟ್ಟಣ ರೈಲು ನಿಲ್ದಾಣದ ವೇದಿಕೆ ನಂ.2 ರಲ್ಲಿ 70 ವರ್ಷದ ಅಪರಿಚಿತ ವ್ಯಕ್ತಿ ರೈಲಿಗೆ ಸಿಕ್ಕಿ ಮೃತಪಟ್ಟಿರುವ ಘಟನೆ ಸೋಮವಾರ ನಡೆದಿದೆ. ಮೃತದೇಹವನ್ನು ಮಂಡ್ಯ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ. ಮೃತರ ಚಹರೆ- 5 ಅಡಿ ಎತ್ತರ, ಸಾಧಾರಣ ಶರೀರ, ಗೋಧಿ ಮೈಬಣ್ಣ, ಕೋಲು ಮುಖ, ಉದ್ದ ಮೂಗು, ತಲೆ ಮುಂಭಾಗ ಬೋಳಾಗಿದ್ದು, ತಲೆಯಲ್ಲಿ 1 ಇಂಚು ಬಿಳಿ ಕೂದಲಿದೆ. ಗಡ್ಡ ಮೀಸೆ ಬಿಟ್ಟಿದ್ದಾರೆ. ಬಲ ತೊಡೆಯಲ್ಲಿ ಕಪ್ಪು ಮಚ್ಚೆ ಇದೆ. ಬಿಳಿ ಶರ್ಟ್, ಬನಿಯನ್, ಅಂಡರ್‌ವೇರ್‌ಧರಿಸಿದ್ದಾರೆ. ಮೃತರ ವಾರಸುದಾರರು ಇದ್ದಲ್ಲಿ ದೂ. 0821- 2516579, 94808 02122 ಸಂಪರ್ಕಿ ಸಲು ಮೈಸೂರು ರೈಲ್ವೆ ಠಾಣೆಯ ಪೊಲೀಸರು ಕೋರಿದ್ದಾರೆ.

ಕನ್ನಡ ಮಾಧ್ಯಮದಲ್ಲಿ ಓದುವವರ ಸಂಖ್ಯೆ ಕ್ಷೀಣ

ತಾ. ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಚ್ ಎನ್ ಲೋಕೇಶ್ ಬೇಸರ | ಕನ್ನಡದಲ್ಲಿ 125ಕ್ಕೆ 125 ಅಂಕ ಪಡೆದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

• **ಕನ್ನಡಪ್ರಭ ವಾರ್ತೆ** ಚನ್ನರಾಯಪಟ್ಟಣ

ಕನ್ನಡ ಮಾಧ್ಯಮದಲ್ಲಿ ಓದುವವರ ಸಂಖ್ಯೆ ದಿನೇ ದಿನೇ ಕಡಿಮೆಯಾಗುತ್ತಿದೆ ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಚ್ ಎನ್ ಲೋಕೇಶ್ ಆತಂಕ ವ್ಯಕ್ತಪಡಿಸಿದರು.

ಪಟ್ಟಣದ ಬಿ ಎಂ ರಸ್ತೆಯಲ್ಲಿರುವ ಕರ್ನಾಟಕ ಸಂಘದಲ್ಲಿ ನಡೆದ ಕರ್ನಾಟಕ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಮತ್ತು ಹತ್ತನೇ ತರಗತಿಯಲ್ಲಿ ಕನ್ನಡದಲ್ಲಿ 125ಕ್ಕೆ 125 ಅಂಕ ಪಡೆದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿ, ಕನ್ನಡ ಮಾಧ್ಯಮದಲ್ಲಿ ಓದುವವರ ಸಂಖ್ಯೆ ದಿನೇ ದಿನೇ ಕಡಿಮೆಯಾಗುತ್ತಿದೆ. ದಯಮಾಡಿ ವಿದ್ಯಾರ್ಥಿಗಳು ಕನ್ನಡ ನಾಡಲ್ಲಿ ಹುಟ್ಟಿ ಕನ್ನಡ ನಾಡಲ್ಲಿ ಬೆಳೆದು ಕನ್ನಡ ಭಾ?ಗೆ ತನ್ನದೇ ಆದ ಸ್ಥಾನಮಾನವಿದೆ. ಆ ಸ್ಥಾನಮಾನಕ್ಕೆ ಎಲ್ಲರೂ ಕೂಡ ಗೌರವ ಸಲ್ಲಿಸಬೇಕು. ಆ ದೃಷ್ಟಿಯಿಂದ ವಿದ್ಯಾರ್ಥಿಗಳು ಕನ್ನಡ ಭಾಷೆಗೆ ಮೊದಲು ಗೌರವವನ್ನು ನೀಡಿ ಅದರಲ್ಲೂ ವಿದ್ಯಾರ್ಥಿಗಳಿಗೆ ಅತಿ ಹೆಚ್ಚು ಅಂಕ ಪಡೆಯಲು ಶಿಕ್ಷಕರ ಪಾತ್ರ ತಂದೆ ತಾಯಿಗಳ ಪಾತ್ರ ಬಹುಮುಖ್ಯವಾಗಿದೆ. ಜೊತೆಯಲ್ಲಿ ಕಾಣದ ಕೈಗಳು ಕೂಡ ನಿಮ್ಮೊಂದಿಗೆ ಕೈಜೋಡಿಸಿ ಹೆಚ್ಚು ಅಂಕ ಪಡೆಯಲು ಸಹಕರಿಸಿದ್ದಾರೆ. ಅದನ್ನು ಎಂದಿಗೂ ಮರೆಯಬಾರದು ಸನ್ಮಾನ ಗೌರವಗಳು ತಮ್ಮ ಹೃದಯದಲ್ಲಿ ಇಟ್ಟುಕೊಳ್ಳಬೇಕೇ ಹೊರತು ಅದನ್ನು ತಮ್ಮ ಮುಡಿಯಲ್ಲಿ ಇಟ್ಟುಕೊಂಡರೆ ಅದರಂತ ಮಹಾನ್ ದೊಡ್ಡ ತಪ್ಪು ಬೇರೊಂದು ಇಲ್ಲ. ಸನ್ಮಾನಗಳು ಗೌರವಗಳು ತಾವಾಗಿ ತಾವು ತಮ್ಮನ್ನು ಹುಡುಕಿಕೊಂಡು ಬರಬೇಕೆ ಹೊರತು ನಾವಾಗಿ ನಾವು ಹುಡುಕಿಕೊಂಡು ಹೋದರೆ ಅದರಂತಹ ದೊಡ್ಡ ಅಪರಾಧ ಮತ್ತೊಂದಿಲ್ಲ. ಆದ್ದರಿಂದ ವಿದ್ಯಾರ್ಥಿಗಳು ಹೆಚ್ಚು ವಿದ್ಯೆಗೆ ಆದ್ಯತೆ ನೀಡಿ ತಮ್ಮ ಮುಂದಿನ ಭವಿಷ್ಯವನ್ನು ರೂಪಿಸಿ ಕೊಳ್ಳಲು ಸಹಕಾರಿಯಾಗಬೇಕು ಎಂದರು.


ಎಸ್ಸೆಸ್ಸೆಲ್ಸಿಯ ಕನ್ನಡ ವಿಷಯದಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ನಿವೃತ್ತ ಕನ್ನಡ ಪ್ರಾಂಶುಪಾಲ ಸಿದ್ದೇಗೌಡ ಮಾತನಾಡಿ ಜ್ಞಾನ ಬಹು ಮುಖ್ಯವಾಗಿ ಬೇಕಾಗಿದೆ. ಏಕೆಂದರೆ ಜ್ಞಾನ ಎಂದರೆ ವ್ಯಾಪಾರಿಕವಾಗಿ ಅಲ್ಲ ವಿದ್ಯಾಭ್ಯಾಸಕ್ಕಲ್ಲ, ಪ್ರತಿಯೊಂದು ವಿಚಾರಕ್ಕೂ ಪ್ರತಿಯೊಬ್ಬರಿಗೂ ಜ್ಞಾನದ ಅವಶ್ಯಕತೆ ಹೆಚ್ಚಾಗಿದೆ. ಏಕೆಂದರೆ ಇಂದು ದೊಡ್ಡ ದೊಡ್ಡ ಹುದ್ದೆಯನ್ನು ಅಲಂಕರಿಸಿರುವವರ ಜ್ಞಾನವನ್ನು ಆಧರಿಸಿ ಇವರು ಉನ್ನತ ಹುದ್ದೆಯಲ್ಲಿ ಇರುವುದು ಇನ್ನೂ ಕೆಲವರು ವಿದ್ಯೆ ಇಲ್ಲದೆ ಜ್ಞಾನವನ್ನು ಪಡೆದು ಜ್ಞಾನಿಗಳಾಗಿ ತಮ್ಮ ಕೆಲಸವನ್ನು ನಿರ್ವಹಿಸುತ್ತಿದ್ದಾರೆ. ಇವರು ಕೂಡ ಉನ್ನತ ಹುದ್ದೆಯಲ್ಲೇ ಇದ್ದಾರೆ. ಡಿವಿಜಿ ಅವರ ಮಾತಿನಂತೆ ಇರುವ ಕೆಲಸವನ್ನು ಮಾಡು ಅದರಲ್ಲೇ ತೃಪ್ತಿಯನ್ನು ಕೊಡು ಇಲ್ಲದೇ ಕೆಲಸವನ್ನು ಮಾಡಲು ಹೆದೂಗಿ ಇರುವ ನೆಮ್ಮದಿಯನ್ನು ಹಾಳು ಮಾಡಿಕೊಳ್ಳಬೇಡ ಎಂಬ ಗಾದೆಯಂತೆ ಮನುಷ್ಯನು ಇರುವ ಕೆಲಸದಲ್ಲೇ ತೃಪ್ತಿ ಪಡಬೇಕು. ಬೇರೊಂದು ಕೆಲಸಕ್ಕೆ ಆಸೆಪಟ್ಟು ತಮ್ಮ ನೆಮ್ಮದಿಯನ್ನು ಹಾಳು ಮಾಡಿಕೊಳ್ಳುವುದು ಒಳ್ಳೆಯದಲ್ಲ. ಈ ಕಾರ್ಯಕ್ರಮದ ಮೂಲ ಉದ್ದೇಶ ವಿದ್ಯಾರ್ಥಿಗಳ ಯಶಸ್ಸಿನ ಕಾರ್ಯಕ್ರಮ ಎಂದು ತಿಳಿದುಕೊಂಡರೆ ಅದು ನಿಮ್ಮ ತಪ್ಪು ಕಲ್ಪನೆ ಇದರ ಮೂಲ ಉದ್ದೇಶ ನಿಮ್ಮ ಹಿಂದೆ ಇರುವ ಗುರುಗಳು ಮತ್ತು ಗುರಿಗೆ ಎರಡು ಅನ್ನು ಆದರಿಸಿ ವಿದ್ಯಾರ್ಥಿಗಳು ತಮ್ಮ ಜೀವನದ ಯಶಸ್ಸಿಗೆ ಸಹಕಾರಿಯಾಗುತ್ತದೆ ಆ ದೃಷ್ಟಿಯನ್ನು ಇಟ್ಟುಕೊಂಡು ಮಾಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ 35 ಜನ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಸತೀಶ್ ಟಿ. ಎ., ತಾಲೂಕು ಕೆ ಡಿ ಪಿ ಸದಸ್ಯ ಮಹೇಶ್‌ಕಬ್ಬಾಳು, ಕರ್ನಾಟಕ ಸಂಘದ ಅಧ್ಯಕ್ಷ ಆದಿಶೇಷ ಕುಮಾರ್, ಕುಂಬಾರಹಳ್ಳಿ ರಮೇಶ್, ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಅಶೋಕ್, ಬಿಜೆಪಿ ಮುಖಂಡ ನಂಜುಂಡ ಮೈಮ್, ಕನ್ನಡ ಸಾಹಿತ್ಯ ಪರಿ?ತ್ತಿನ ಉಪಾಧ್ಯಕ್ಷ ಮುಳ್ಕೆರೆ ಪ್ರಕಾಶ್, ಮಾಧ್ಯಮ ಕಾರ್ಯದರ್ಶಿ ನಂದನ್ ಪುಟ್ಟಣ್ಣ, ಕಾರ್ಯದರ್ಶಿ ಜಬೀ ಉಲ್ಲಾ ಬೇಗ್, ಸಂಘಟನಾ ಕಾರ್ಯದರ್ಶಿ ಮಲ್ಲೇಗೌಡ, ಶಿವನಗೌಡಪಾಟೀಲ್, ಮಹಿಳಾ ಪದಾಧಿಕಾರಿಗಳಾದ ಯಶೋಧ ಜೈನ್, ಅನಿತಾ, ರೂಪ ಇನ್ನು ಮುಂತಾದವರು ಹಾಜರಿದ್ದರು.

ಅಪ್ಪು ಹುಟ್ಟುಹಬ್ಬಕ್ಕಾಗಿ ಗ್ರಂಥಾಲಯ ಉದ್ಘಾಟನೆ

15 ಬಡ ಕುಟುಂಬಗಳಿಗೆ ನಿವೇಶನ ಹಕ್ಕುಪತ್ರ ವಿತರಿಸಿದ ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್

• **ಕನ್ನಡಪ್ರಭ ವಾರ್ತೆ** ಬೇಲೂರು

ಡಾ. ಪುನೀತ್ ರಾಜ್‌ಕುಮಾರ್‌ಅವರ 51ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಹಗರೆಯ ಋಗ್ವೇದ ರೆಸಾರ್ಟ್‌ನಲ್ಲಿ ಆಯೋಜಿಸಿದ್ದ ಗ್ರಂಥಾಲಯ ಉದ್ಘಾಟನೆ ಹಾಗೂ 15 ಬಡ ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ, ಕಾರ್ಯಕ್ರಮವನ್ನು ಅಶ್ವಿನಿ ಪುನೀತ್ ರಾಜ್‌ಕುಮಾರ್‌ಉದ್ಘಾಟಿಸಿದರು.



ಡಾ. ಪುನೀತ್ ರಾಜ್‌ಕುಮಾರ್ ಅವರ 51ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಹಗರೆಯ ಋಗ್ವೇದ ರೇಸಾಟ್‌ನಲ್ಲಿ ಮಾಲೀಕರಾದ ಡಿಶಾಂತ್ ಅವರ ನೇತೃತ್ವದಲ್ಲಿ ಆಯೋಜಿಸಿದ್ದ ಗ್ರಂಥಾಲಯ ಉದ್ಘಾಟನಾ ಕಾರ್ಯಕ್ರಮಕ್ಕೆ ಆಗಮಿಸಿದ ಅಶ್ವಿನಿ ಪುನೀತ್ ರಾಜ್ ಕುಮಾರ್‌ಅವರಿಗೆ ಭವ್ಯ ಸ್ವಾಗತ ಕೋರಿದರು. ನಂತರ ಶಾಸಕ ಎಚ್ ಕೆ ಸುರೇಶ್ ಮಾತನಾಡಿ, ಬಡ ಕುಟುಂಬ ಗಳಿಗೆ ಹಕ್ಕುಪತ್ರ ವಿತರಿಸುವ ಉದ್ದೇಶದಿಂದಲೇ ಅಶ್ವಿನಿ ಪುನೀತ್ ರಾಜ್‌ಕುಮಾರ್‌ಅವರನ್ನು ವಿಶೇಷವಾಗಿ ಆಹ್ವಾನಿಸಲಾಗಿದೆ. ಡಾ. ಪುನೀತ್ ರಾಜಕುಮಾರ್ ಅವರು ಮಾಡಿದ ದಾನ ಧರ್ಮಗಳು ಇಂದಿಗೂ ಅಜರಾಮರವಾಗಿದೆ. ಪುನೀತ್ ರಾಜ್‌ಕುಮಾರ್‌ನಿಧನದ ದಿನವೇ ಕ್ಷೇತ್ರದಲ್ಲಿ ನಡೆಯಬೇಕಿದ್ದ 127 ಕೋಟಿ ರಣಘಟ್ಟ ಯೋಜನೆಯ ಕಾರ್ಯಕ್ರಮವನ್ನು ಮುಂದೂಡಲಾಗಿತ್ತು. ಅಂದು ಅವರ ಅಗಲಿಕೆ ಇಡೀ ಕ್ಷೇತ್ರವನ್ನು ದುಃಖದಲ್ಲಿ ಮುಳುಗಿಸಿತ್ತು. ಋಗ್ವೇದ ರೆಸಾರ್ಟ್ ಕೇವಲ ರೆಸಾರ್ಟ್ ಅಲ್ಲ, ಗ್ರಂಥಾಲಯ ಹಾಗೂ ಆರೋಗ್ಯ ಸೇವೆಗಳನ್ನೊಳಗೊಂಡ ಸಾಮಾಜಿಕ ಸೇವಾ ಕೇಂದ್ರವಾಗಲಿದೆ , ಡಿಶಾಂತ್ ಕುಮಾರ್‌ಮತ್ತು ಅವರ ಕುಟುಂಬ ಸಮಾಜಮುಖಿ ಕಾರ್ಯ ಮಾಡುತ್ತಿರುವುದನ್ನು ಶ್ಲಾಘಿಸಿದರು.

ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಬಿ. ಶಿವರಾಜು ಮಾತನಾಡಿ, ಅಶ್ವಿನಿ ಪುನೀತ್ ರಾಜ್‌ಕುಮಾರ್‌ಅವರು ಸರಳತೆ, ಶಾಂತ ಸ್ವಭಾವ ಮತ್ತು ಸಮಾಜಮುಖಿ ಕಾರ್ಯಗಳ ಮೂಲಕ ಎಲ್ಲರಿಗೂ ಮಾದರಿಯಾಗಿದ್ದಾರೆ. ಡಾ. ರಾಜ್‌ಕುಮಾರ್ ಅವರಂತಹ ಹೆಸರಾಂತ ಕುಟುಂಬದ ಸೊಸೆಯಾಗಿದ್ದರೂ ಅಶ್ವಿನಿ ಅವರು ಎಂದಿಗೂ ಅಹಂಕಾರ ತೋರಿಸಿಲ್ಲ. ಪುನೀತ್ ರಾಜ್‌ಕುಮಾರ್‌ಅವರ ಕನಸಿನ ಕೂಸಾದ ಪಿಆರ್‌ಕೆ ಪ್ರೊಡಕ್ಷನ್ಸ್ ಸಂಸ್ಥೆಯನ್ನು ಅಶ್ವಿನಿ ಅವರು ಅತ್ಯಂತ ಜವಾಬ್ದಾರಿಯಿಂದ ಮುನ್ನಡೆಸುತ್ತಿದ್ದಾರೆ ಜೊತೆಗೆ, ಹೊಸ ಪ್ರತಿಭೆಗಳಿಗೆ ಅವಕಾಶ ಕಲ್ಪಿಸುತ್ತಿದ್ದಾರೆ. ಕಷ್ಟದ ಸಮಯದಲ್ಲೂ ಧೈರ್ಯವಾಗಿ ನಿಂತು ತಮ್ಮ ಪತಿಯ ಕನಸುಗಳನ್ನು ಜೀವಂತವಾಗಿಟ್ಟಿರುವ ಅಶ್ವಿನಿ ಅವರು ಇಂದು ಲಕ್ಷಾಂತರ ಮಹಿಳೆಯರಿಗೆ ಸ್ಫೂರ್ತಿಯಾಗಿದ್ದಾರೆ ಎಂದರು. ಇದೇ ವೇಳೆ ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರು ಗ್ರಂಥಾಲಯ ಉದ್ಘಾಟನೆ ಮಾಡಿದ ಬಳಿಕ 15 ಬಡ ಕುಟುಂಬಗಳಿಗೆ ನಿವೇಶನ ಹಕ್ಕುಪತ್ರ ವಿತರಿಸಿದರು. ಜೊತೆಗೆ ಹಗರೆ ಭಾಗದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಪ್ರೋತ್ಸಾಹಿಸಿದರು.

ಈ ಸಂದರ್ಭದಲ್ಲಿ ಸಾಹಿತಿ ಚಟ್ನಳ್ಳಿ ಮಹೇಶ್, ಹಗರೆ ಡಿಶಾಂತ್, ಬ್ಯಾಂಕ್ ವ್ಯವಸ್ಥಾಪಕಿ ಮಮತಾ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಶಿಸ್ತುಬದ್ಧ ಸಮಾಜ ನಿರ್ಮಾಣದಲ್ಲಿ ಡಾ. ಹರ್ಡೀಕರ್ ಕೊಡುಗೆ ಅಪಾರ

ಭಾರತ ಸೇವಾದಳದ ಸಂಸ್ಥಾಪಕ ನಾ. ಸು. ಹರ್ಡೀಕರ್ ಜಯಂತಿ

• **ಕನ್ನಡಪ್ರಭ ವಾರ್ತೆ** ಬೇಲೂರು

ಭಾರತ ಸೇವಾದಳದ ಸಂಸ್ಥಾಪಕರಾದ ಪದ್ಮಭೂಷಣ ಡಾ. ನಾ. ಸು. ಹರ್ಡೀಕರ್ ಅವರ ಜನ್ಮದಿನಾಚರಣೆಯನ್ನು ಪಟ್ಟಣದ ನಾ. ಸು. ಹರ್ಡೀಕರ್ ವೃತ್ತದಲ್ಲಿ ಭಾರತ ಸೇವಾದಳ, ಹಾಸನ ಜಿಲ್ಲಾ ಘಟಕದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಿ ಡಾ. ನಾ.ಸು. ಹರ್ಡೀಕರ್‌ಅವರ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು.

ಪುರಸಭೆ ಅಧ್ಯಕ್ಷೆ ಉಷಾ ಸತೀಶ್ ಮಾತನಾಡಿ ದೇಶಭಕ್ತಿ, ಸೇವಾ ಮನೋಭಾವ ಮತ್ತು ಶಿಸ್ತುಬದ್ಧ ಸಮಾಜ ನಿರ್ಮಾಣದಲ್ಲಿ ಡಾ. ಹರ್ಡೀಕರ್‌ಅವರ ಕೊಡುಗೆ ಅಪಾರವಾಗಿದೆ. ಭಾರತ ಸೇವಾದಳವು ಯುವಜನರಲ್ಲಿ ರಾಷ್ಟ್ರಭಕ್ತಿ, ಸಾಮಾಜಿಕ ಜವಾಬ್ದಾರಿ ಹಾಗೂ ಸೇವಾ ಚಟುವಟಿಕೆಗಳ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರವಹಿಸಿದೆ. ಹರ್ಡೀಕರ್ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದ ಏಳಿಗೆಗೆ ಇಂದಿನ ಯುವಕರು ಸೇವಾ ಮನೋವೃದ್ಧಿಯಿಂದ ದೇಶಕ್ಕಾಗಿ ಶ್ರಮಿಸಬೇಕು ಎಂದು ಹೇಳಿದರು.

ಭಾರತ ಸೇವಾದಳದ ಮುಖ್ಯಸ್ಥೆ ರಾಣಿ ಮಾತನಾಡಿ ಹರ್ಡೀಕರ್ ಅವರು ದೇಶದ ಯುವಜನತೆಗೆ ಶಿಸ್ತು, ಸೇವಾ ಮನೋಭಾವ ಹಾಗೂ ರಾಷ್ಟ್ರಭಕ್ತಿಯ ದಾರಿಯನ್ನು ತೋರಿದ ಮಹಾನ್ ವ್ಯಕ್ತಿ. ಇಂದಿನ ಯುವಪೀಳಿಗೆ ಸಮಾಜಮುಖಿ ಕಾರ್ಯಗಳಲ್ಲಿ ಹೆಚ್ಚು ತೊಡಗಿಸಿ ಕೊಳ್ಳಬೇಕಿದ್ದು, ಸೇವಾದಳದ ಮೂಲಕ ಸಮಾಜ ಸೇವೆ, ಪರಿಸರ ಜಾಗೃತಿ, ರಾಷ್ಟ್ರೀಯ ಏಕತೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ . ಹರ್ಡೀಕರ್ ಅವರ ತತ್ವ, ಆದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಹೇಳಿದರು.

ಆರ್‌ಐಟಿ - ರಾಮ್ಕೋ ಸಿಮೆಂಟ್ಸ್ ನಡುವೆ ಪ್ರಮುಖ ಒಪ್ಪಂದಕ್ಕೆ ಸಹಿ



• **ಕನ್ನಡಪ್ರಭ ವಾರ್ತೆ** ಹಾಸನ

ನಗರದ ರಾಜೀವ್ ತಾಂತ್ರಿಕ ಮಹಾ ವಿದ್ಯಾಲಯದ ಸಿವಿಲ್ ಎಂಜಿನಿಯರಿಂಗ್ ವಿಭಾಗವು ದಿ ರಾಮ್ಕೋ ಸಿಮೆಂಟ್ಸ್ ಲಿಮಿಟೆಡ್ ನೊಂದಿಗೆ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿತು.

ಇದು ಉದ್ಯಮ ಮತ್ತು ಸಂಸ್ಥೆಯ ಸಹಯೋಗವನ್ನು ಬಲಪಡಿಸುವತ್ತ ಮಹತ್ವದ ಹೆಜ್ಜೆ ಎಂದು ಗುರುತಿಸಲಾಗಿದೆ. ಈ ಒಪ್ಪಂದವು ವಿದ್ಯಾರ್ಥಿಗಳಿಗೆ ವೃತ್ತಿಪರ ಅವಕಾಶಗಳು ಹೆಚ್ಚುವಂತೆ ಮಾಡುವುದೇ ಅಲ್ಲದೆ ಸಿವಿಲ್ ಎಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಪಡೆಯಲು ಸಹಾಯವಾಗುತ್ತದೆ. ಅಲ್ಲದೆ ಪ್ರಸ್ತುತ ಚಾಲ್ತಿಯಲ್ಲಿರುವ ಸನ್ನಿವೇಶಗಳು ಹಾಗೂ ಸಿಮೆಂಟ್ ಸಂಬಂಧಿತ ವಲಯಗಳ ಪ್ರಾಮುಖ್ಯತೆಯನ್ನು ಒತ್ತಿ ಹೇಳುತ್ತದೆ. ಈ ಒಪ್ಪಂದ ಕುರಿತು ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಮಹೇಶ್ ಪಿ.ಕೆ. ಅವರು, ಈ ಒಪ್ಪಂದದಡಿಯಲ್ಲಿ ಸಿವಿಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಘಟಕವನ್ನು ಸ್ಥಾಪಿಸಿ ಆ ಮೂಲಕ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನ ಮತ್ತು ಕೈಗಾರಿಕಾ ಸಂವಹನವನ್ನು ನೀಡುವುದಾಗಿ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ರಾಮ್ಕೋ ಸಿಮೆಂಟ್ಸ್ ಲಿಮಿಟೆಡ್ನ ಅಧಿಕಾರಿಗಳಾದ ಎ. ಅನಿಲ್ ಕುಮಾರ್ ಪಿಳ್ಳೆ, ಶಶಾಂಕ್ ಶರ್ಮ, ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ. ಗೋಪಾಲ್ ಬಿ ಬೆಕ್ಕೇರಿ ಹಾಗೂ ಸಂಯೋಜಕರಾದ ವಾಣಿ, ಸುಪ್ರಿಯ ಸಿ.ಎಲ್., ಶ್ರೀ ಹರ್ಷಿತ್ ಹಾಗೂ ವಿಭಾಗದ ಎಲ್ಲಾ ಸಹಾಯಕ ಪ್ರಾಧ್ಯಾಪಕರು ಈ ಸಂದರ್ಭದಲ್ಲಿ ಹಾಜರಿದ್ದರು.

ಕೃಷ್ಣಮೂರ್ತಿ ಅಧ್ಯಕ್ಷತೆಯಲ್ಲಿ ಇಂದು ಸಾಮಾನ್ಯ ಸಭೆ

ಹಾಸನ: ಜಿಲ್ಲಾ ಪಂಚಾಯತಿ ಯೋಜನಾಧಿಕಾರಿ ಹಾಗೂ ಹಾಸನ ತಾಲೂಕು ಪಂಚಾಯಿತಿ ಆಡಳಿತಾಧಿಕಾರಿಯಾದ ಎನ್. ಕೃಷ್ಣಮೂರ್ತಿ ಅವರ ಅಧ್ಯಕ್ಷತೆಯಲ್ಲಿ ಮೇ 8ರಂದು ಬೆಳಗ್ಗೆ 10.30ಕ್ಕೆ ಸಭೆ ನಡೆಯಲಿದೆ. ಹಾಸನ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸಾಮಾನ್ಯ ಸಭೆಯನ್ನು ಏರ್ಪಡಿಸಲಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.


ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್‌ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

ಗರಿಷ್ಠ 32°c | ಕನಿಷ್ಠ 22°c

ಸುದ್ದಿ ಸಿಂಚನ

ನಾಳೆಯಿಂದ ಪತ್ರಕರ್ತರು-ಅಧಿಕಾರಿಗಳು-ಜನಪ್ರತಿನಿಧಿಗಳ ಕ್ರಿಕೆಟ್ ಪಂದ್ಯಾವಳಿ ಆರಂಭ

ಹಾಸನ: ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಮೇ 9 ಹಾಗೂ 10ರಂದು ಪತ್ರಕರ್ತರು-ಅಧಿಕಾರಿಗಳ ಹಾಗೂ ಜನಪ್ರತಿನಿಧಿಗಳ ಸ್ನೇಹ ಸೌಹಾರ್ದ ಕ್ರಿಕೆಟ್ ಪಂದ್ಯಾವಳಿ ನಗರದ ಸರ್ಕಾರಿ ಕಲಾ ಕಾಲೇಜು ಮೈದಾನ ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ನಡೆಯಲಿದೆ ಎಂದು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆಂಚೇಗೌಡ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಪತ್ರಕರ್ತರು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳ ನಡುವೆ ಉತ್ತಮ ಹೊಂದಾಣಿಕೆ, ಸ್ನೇಹಪೂರ್ಣ ಸಂಬಂಧ ಹಾಗೂ ಆರೋಗ್ಯಕರ ಮನೋಭಾವ ಬೆಳೆಸುವ ನಿಟ್ಟನಲ್ಲಿ ಈ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. ಈ ಕ್ರೀಡಾ ಸಮ್ಮಿಲನಕ್ಕೆ ಮಾಜಿ ಪ್ರಧಾನಮಂತ್ರಿ ಹಾಗೂ ರಾಜ್ಯಸಭಾ ಸದಸ್ಯರಾದ ಎಚ್.ಡಿ. ದೇವೇಗೌಡರ ಗೌರವ ಉಪಸ್ಥಿತಿ ವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಕಂದಾಯ ಸಚಿವ ಕೃಷ್ಣಬೈರೇಗೌಡರು, ಹಿರಿಯ ಪತ್ರಕರ್ತರು ಹಾಗೂ ಜನಪ್ರತಿನಿಧಿಗಳ ಸ್ನೇಹಪೂರ್ಣ ಪಂದ್ಯಕ್ಕೆ ಚಾಲನೆ ನೀಡಲಿದ್ದಾರೆ ಎಂದರು. ಕಾರ್ಯಕ್ರಮವನ್ನು ಹಾಸನ ಶಾಸಕ ಎಚ್. ಪಿ. ಸ್ವರೂಪ್ ಉದ್ಘಾಟಿಸಲಿದ್ದು, ಹಾಸನ ಲೋಕಸಭಾ ಕ್ಷೇತ್ರದ ಸಂಸದ ಶ್ರೇಯಸ್ ಎಂ. ಪಟೇಲ್ ಕ್ರೀಡಾಕೂಟಕ್ಕೆ ಅಧಿಕೃತ ಚಾಲನೆ ನೀಡಲಿದ್ದಾರೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ದಿಕ್ಸೂಚಿ ಮಾತುಗಳನ್ನಾಡಲಿದ್ದು, ರಾಜ್ಯ ಉಪಾಧ್ಯಕ್ಷ ಎಚ್.ಬಿ. ಮದನ್ ಗೌಡ ಆಶಯ ನುಡಿಗಳನ್ನಾಡಲಿದ್ದಾರೆ. ಒಟ್ಟು 16 ತಂಡಗಳು ಭಾಗವಹಿಸಲಿದ್ದು, ಟ್ರೋಫಿ ಮತ್ತು ಬಹುಮಾನ ವಿತರಣೆ ಮಾಡಲಾಗುವುದು ಎಂದು ಮಾಹಿತಿ ನೀಡಿದರು. ಮೇ 10ರಂದು ಸಂಜೆ 4 ಗಂಟೆಗೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಹೊಳೆನರಸೀಪುರ ಶಾಸಕ ಎಚ್.ಡಿ. ರೇವಣ್ಣ ಸಮಾರೋಪ ನುಡಿ ನುಡಿಯಲಿದ್ದಾರೆ. ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ. ಸುರೇಶ್, ಜಿ. ಪ್ರಕಾಶ್, ಪ್ರಕಾಶ್ ಇತರರು ಉಪಸ್ಥಿತರಿದ್ದರು.

ಯುವಕ ನಾಪತ್ತೆ

ಹಾಸನ: ಹಾಸನ ತಾಲೂಕಿನ ಕಸಬಾ ಹೋಬಳಿಯ ತವರದೇವರಕೊಪ್ಪಲು ಗ್ರಾಮದ 17 ವರ್ಷದ ಹರ್ಷ ಎಂಬ ಯುವಕ ಕಾಣೆಯಾಗಿದ್ದು, ಹಾಸನ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 5 ಅಡಿ ಎತ್ತರ, ಗೋಧಿ ಮೈಬಣ್ಣ, ತೆಳುವಾದ ಶರೀರ, ಕಪ್ಪು ತಲೆಕೂದಲು, ಸ್ವಲ್ಪ ಗಡ್ಡ ಮೀಸೆ ಬಿಟ್ಟಿರುತ್ತಾನೆ, ಎರಡು ಕಿವಿಗಳ ಮುಂಭಾಗ ಸಣ್ಣ ಗಂಟು ಇರುತ್ತದೆ. ಕಾಣೆಯಾದಾಗ ಆಕಾಶ ನೀಲಿ ಬಣ್ಣದ ಟೀ ಶರ್ಟ್, ಕಾಫಿ ಬಣ್ಣದ ಚಡ್ಡಿ ಧರಿಸಿರುತ್ತಾನೆ, ಎರಡು ಕಿವಿಗಳಲ್ಲಿ ಚಿನ್ನದ ರಿಂಗ್ ಹಾಕಿರುತ್ತಾನೆ, ತೊದಲುತ್ತಾ ಕನ್ನಡ ಭಾಷೆ ಮಾತನಾಡುತ್ತಾನೆ. ಈ ಬಾಲಕನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಪೊಲೀಸ್ ಅಧೀಕ್ಷಕರ ದೂರವಾಣಿ ಸಂಖ್ಯೆ : 08172-268410, ಗ್ರಾಮಾಂತರ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08172-268630, ಪೊಲೀಸ್ ಇನ್ಸ್‌ಪೆಕ್ಟರ್, ಮಹಿಳಾ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 9480804722ಗೆ ಮಾಹಿತಿ ನೀಡಬಹುದಾಗಿದೆ ಎಂದು ಮಹಿಳಾ ಪೊಲೀಸ್ ಠಾಣೆಯ ಅಧಿಕಾರಿಗಳು ತಿಳಿಸಿದ್ದಾರೆ.

ಜಲಾಶಯದ ಮಟ್ಟ

ಹೇಮಾವತಿ 07-05-2026

ಗರಿಷ್ಠ ಮಟ್ಟ	2922 (ಅಡಿಗಳು)
ಇಂದಿನ ಮಟ್ಟ	2895.46 ಅಡಿಗಳು
ಒಳಹರಿವು	49 ಕ್ಯುಸೆಕ್
ಹೊರ ಹರಿವು	300 ಕ್ಯುಸೆಕ್



ಚನ್ನರಾಯಪಟ್ಟಣ ತಾಲೂಕಿನ ದಂಡಿಗನಹಳ್ಳಿ ಹೋಬಳಿಯ ಬರಗೂರು ಕೃಷಿಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಅವಿರೋಧವಾಗಿ ಡಿ.ಕೆ. ಲಕ್ಷ್ಮೀಶ ಆಯ್ಕೆಯಾಗಿದ್ದಾರೆ. ಇವರನ್ನು ಉಪಾಧ್ಯಕ್ಷರಾದ ಜಯರಾಮ್ ನಿರ್ದೇಶಕರಾದ ಬಿ. ಆರ್. ನಾರಾಯಣಸ್ವಾಮಿ, ಸದಸ್ಯರು ಹಾಗೂ ಸ್ನೇಹಿತರು ಬಂಧುಗಳು ಅಭಿನಂದಿಸಿದರು.



ಬೇಲೂರಿನಲ್ಲಿ ಭಾರತ ಸೇವಾದಳದ ವತಿಯಿಂದ ಡಾ. ನಾ.ಸು. ಹರ್ಡೀಕರ್ ಜನ್ಮದಿನಾಚರಣೆಯನ್ನು ಹಾಸನ ಜಿಲ್ಲಾ ಘಟಕದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಭಾರತ ಸೇವಾದಳದ ಅಧ್ಯಕ್ಷ ಯುವರಾಜು, ಬಾಳೆಹಣ್ಣು ರಮೇಶ್, ವೆಂಕಟೇಶ್ ಇತರರು ಹಾಜರಿದ್ದರು.

ಬರಗೂರು ಸೊಸೈಟಿಗೆ ಲಕ್ಷ್ಮೀಶ್ ಅವಿರೋಧ ಆಯ್ಕೆ

ಚನ್ನರಾಯಪಟ್ಟಣ: ತಾಲೂಕಿನ ದಂಡಿಗನಹಳ್ಳಿ ಹೋಬಳಿಯ ಬರಗೂರು ಕೃಷಿಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಅವಿರೋಧವಾಗಿ ಡಿ.ಕೆ. ಲಕ್ಷ್ಮೀಶ ಆಯ್ಕೆಯಾಗಿದ್ದಾರೆ. ಬಿ.ಪಿ. ಹರೀಶ ಅವರು ತೆರವು ಮಾಡಿದ್ದ ಸ್ಥಾನಕ್ಕೆ ಈ ದಿನ ನಡೆದ ಚುನಾವಣೆಯಲ್ಲಿ ಸಹಕಾರಿ ಅಭಿವೃದ್ಧಿ ಅಧಿಕಾರಿ ವಿಜಯೇಂದ್ರ ಅವರ ನೇತೃತ್ವದಲ್ಲಿ ನಡೆದ ಚುನಾವಣೆಯಲ್ಲಿ ಡಿ.ಕೆ. ಲಕ್ಷ್ಮೀಶ್ ಒಬ್ಬರೇ ಅರ್ಜಿ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಆಯ್ಕೆಯಾದ ಲಕ್ಷ್ಮೀಶವರನ್ನು ನಿರ್ದೇಶಕರು ಹಾಗೂ ಸ್ನೇಹಿತರು ಬಂಧುಗಳು ಅಭಿನಂದಿಸಿದರು. ಅಧಿಕಾರ ವಹಿಸಿಕೊಂಡ ನಂತರ ಮಾತನಾಡಿದ ಲಕ್ಷ್ಮೀಶ ಅವರು ನಮ್ಮ ಸಹಕಾರಿ ಸಂಘದಲ್ಲಿ 1700 ಜನ ಷೇರುದಾರರಿದ್ದು ಅದರಲ್ಲಿ 1100 ಜನರಿಗೆ 8 ಕೋಟಿಯಷ್ಟು ಸಾಲ ಒದಗಿಸಲಾಗಿದೆ. 30 ಸಸಹಾಯ ಸಂಘ ಗುಂಪುಗಳಿಗೆ 94 ಲಕ್ಷ ರು. ಸಾಲ ನೀಡಲಾಗಿದೆ. ಸಕಾಲಕ್ಕೆ ಮರುಪಾವತಿಸುವ ಸದಸ್ಯರಿಗೆ ಹೆಚ್ಚುವರಿ ಸಾಲ ನೀಡುವ ಸಾಧ್ಯತೆ ಇದ್ದು, ಶಾಸಕರಾದ ರೇವಣ್ಣನವರ ಸಹಕಾರ ಹಾಗೂ ವಿಧಾನ ಪರಿಷತ್ ಸದಸ್ಯರಾದ ಸೂರಜ್ ರೇವಣ್ಣನವರ ಸಹಕಾರದಿಂದ ಇನ್ನೂ ಹೆಚ್ಚಿನ ಸಲಹೆಗಳನ್ನು ರೈತರಿಗೆ ನೀಡಲಾಗುವುದು ಎಂದು ತಿಳಿಸಿದರು.

ಖಾತೆಗಾಗಿ 17ನೇ ದಿನವೂ ಮುಂದುವರಿದ ಧರಣಿ

2022ರಲ್ಲೇ ರಾಮನಾಥಪುರದ 47 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ | ಇದುವರೆಗೂ ಖಾತೆ ಮಾಡಿಲ್ಲ ಎಂದು ಆರೋಪ

• **ಕನ್ನಡಪ್ರಭ ವಾರ್ತೆ** ಹಾಸನ

ಹಕ್ಕುಪತ್ರಗಳನ್ನು ವಿತರಿಸಿ ನಾಲ್ಕು ವರ್ಷಗಳಾದರೂ ಖಾತೆ ಮಾಡಿಕೊಡದೆ ವಿಳಂಬ ಮಾಡುತ್ತಿರುವುದಾಗಿ ಆರೋಪಿಸಿ ಅರಕಲಗೂಡು ತಾಲೂಕು ರಾಮನಾಥಪುರ ಗ್ರಾಮದ ವಸತಿರಹಿತರು ಜಿಲ್ಲಾಧಿಕಾರಿ ಕಚೇರಿ ಎದುರು ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ 17ನೇ ದಿನವು ಮುಂದುರಿಯಿತು.

ರಾಮನಾಥಪುರ ಗ್ರಾಮಸ್ಥ ಬಾಲಸುಬ್ರಮಣ್ಯ ಮಾಧ್ಯಮದೊಂದಿಗೆ ಮಾತನಾಡಿ, ನಮ್ಮ ಹಕ್ಕುಪತ್ರಕ್ಕಾಗಿ ನಾವು ಡಿಸಿ ಕಚೇರಿ ಮುಂದೆ ಧರಣಿ ಆರಂಭಿಸಿದ್ದೇವು. ಆದರೆ ಅಲ್ಲಿಂದ ನಮ್ಮನ್ನು ಅಂಬೇಡ್ಕರ್ ಪ್ರತಿಮೆ ಹಿಂಬಾಕ್ಕೆ ಸ್ಥಳ ಬದಲಾಯಿಸಿದರು. ಮೊದಲು ಇದ್ದ ಜಾಗದಲ್ಲಿ ಇದ್ದಿದ್ದರೇ ನಮ್ಮ ಧರಣಿ ಅಧಿಕಾರಿಗಳಿಗೆಮುಟ್ಟುತ್ತಿತ್ತು. ಈಗಇಲ್ಲಿಕೇಳುವವರೆ ಯಾರು ಇಲ್ಲ. ಮಳೆ ಬಂದರೇ ನೆನೆದುಕೊಂಡು ಕುಳಿತುಕೊಳ್ಳಬೇಕು. ಇನ್ನು ಬಿಸಿಲಿನ ಬೇಗೆ ತಡೆಯಲುಆಗುತ್ತಿಲ್ಲ. ಸೊಳ್ಳೆಯಿಂದನರಳುತ್ತಿದ್ದೇವೆ. ಆದರೇ ನಮ್ಮ ಬೇಡಿಕೆ ಈಡೇರುವವರೆಗೂ ನಾವು ಹೋರಾಟ ನಿಲ್ಲಿಸುವುದಿಲ್ಲ ಎಂದರು.



ನಮ್ಮ ಪ್ರಮುಖ ಬೇಡಿಕೆಗಳೆಂದರೆ 2020-21ನೇ ಸಾಲಿನಲ್ಲಿ ''ರಾಜೀವ್ ಗಾಂಧಿ ವಸತಿ ನಿಗಮ'' ಯೋಜನೆಯಡಿ ಅರ್ಹ ಫಲಾನುಭವಿಗಳ ಪಟ್ಟಿಯನ್ನು ಗ್ರಾಮ ಪಂಚಾಯಿತಿ ತಯಾರಿಸಿ, ಸಾರ್ವಜನಿಕವಾಗಿ ಪ್ರಕಟಿಸಿತ್ತು. 2020ರ ಮಾರ್ಚ್ 7ರಿಂದ ಸುಮಾರು ನಾಲ್ಕು, ಐದು ತಿಂಗಳುಗಳ ಕಾಲ ನೋಟಿಸ್ ಬೋರ್ಡಿನಲ್ಲಿ ಪಟ್ಟಿ ಪ್ರದರ್ಶಿಸಲಾಗಿತ್ತು. ನಂತರ ತಾಲೂಕು ದಂಡಾಧಿಕಾರಿಗಳ ಸಮ್ಮುಖದಲ್ಲಿ ಸಭೆ ಹಾಗೂ ಗ್ರಾಮಸಭೆ ನಡೆಸಿ, ಯಾವುದೇ ಆಕ್ಷೇಪಣೆ ಇಲ್ಲದ ಹಿನ್ನೆಲೆಯಲ್ಲಿ ಅನುಮೋದನೆ ನೀಡಲಾಗಿತ್ತು ಎಂದು ವಿವರಿಸಿದರು.

ಇದಾದ ಬಳಿಕ 2022ರ ಅಕ್ಟೋಬರ್ 10ರಂದು ರಾಮನಾಥಪುರ ನೂತನ ಬಸ್ ನಿಲ್ದಾಣ ಉದ್ಘಾಟನಾ ಕಾರ್ಯಕ್ರಮದ ಸಂದರ್ಭದಲ್ಲಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ 47 ಫಲಾನುಭವಿಗಳಿಗೆ ಹಕ್ಕುಪತ್ರ ಗಳನ್ನು ವಿತರಿಸಲಾಗಿದೆ. ಆದರೆ ಇದುವರೆಗೆ ಖಾತೆ ಮಾಡಿಕೊಡದಿರುವುದು ಅನ್ಯಾಯ ಎಂದು ಅವರು ಆರೋಪಿಸಿದರು. ಪಂಚಾಯಿತಿ ಅಧಿಕಾರಿಗಳು ಕೋವಿಡ್ ಅವಧಿಯಲ್ಲಿ ಕೇವಲ 15 ದಿನ ಮಾತ್ರ ನೋಟಿಸ್ ನೀಡಲಾಗಿದೆ ಎಂದು ತಪ್ಪು ಮಾಹಿತಿ ನೀಡುತ್ತಿದ್ದಾರೆ. ಆದರೆ ಆ ಅವಧಿಯಲ್ಲಿ ಇತರ ಕಾರ್ಯಗಳು ನಡೆದಿರುವುದು ದಾಖಲೆಗಳಿಂದ ಸ್ಪಷ್ಟವಾಗುತ್ತದೆ ಎಂದು ಪ್ರಶ್ನಿಸಿದರು.

ಈಗಕೆಲವರು ಹಣಕ್ಕಾಗಿ ಉದ್ದೇಶಪೂರ್ವಕವಾಗಿ ತಕರಾರು ಎಬ್ಬಿಸುತ್ತಿದ್ದಾರೆ ಹಾಗೂ ಇಲ್ಲಿನ ಜನಪ್ರತಿನಿಧಿಗಳ ಕುಮಕ್ಕು ಇದೆ ಎಂದು ಗಂಭೀರವಾಗಿ ದೂರಿದರು.

ಖಾತೆ ಮಾಡಲು ಹಲವು ದಾಖಲೆಗಳನ್ನು ಕೇಳಲಾಗುತ್ತಿದೆ. ಹೆಚ್ಚಿನ ದಾಖಲೆಗಳನ್ನು ನೀಡಲು ಸಿದ್ಧರಾಗಿದ್ದರೂ, ''ಮೂರು ತಲೆಮಾರಿನ ವಂಶವೃಕ್ಷಂತಹ ದಾಖಲೆಗಳನ್ನು ಒದಗಿಸುವುದು ಬಡ ಕಾರ್ಮಿಕರಿಗೆ ಸಾಧ್ಯವಾಗುತ್ತಿಲ್ಲ. ಇದನ್ನೇ ನೆಪ ಮಾಡಿಕೊಂಡು ಅಧಿಕಾರಿಗಳು ಖಾತೆ ನೀಡಲು ವಿಳಂಬ ಮಾಡುತ್ತಿದ್ದಾರೆ ಎಂದು ಹೇಳಿದರು. ಇದಲ್ಲದೆ, ಏಪ್ರಿಲ್ 15 ಹಾಗೂ ಮೇ 27ರಿಂದ ನಾಲ್ಕು ದಿನಗಳ ಕಾಲ ಮಳೆ ಮಧ್ಯೆಯೇ ವೃದ್ಧರು, ಮಹಿಳೆಯರು, ಮಕ್ಕಳು ಸೇರಿ ಪಂಚಾಯಿತಿ ಮುಂದೆ ಧರಣಿ ನಡೆಸಿದರೂ ಯಾವುದೇ ಸ್ಪಂದನೆ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ವಸತಿ ಇಲ್ಲದೆ ಬಾಡಿಗೆ ಕಟ್ಟುತ್ತ ಜೀವನ ಸಾಗಿಸುವ ಸ್ಥಿತಿಯಲ್ಲಿರುವ ನಾವು, ಸ್ವಂತ ಮನೆ ಕಟ್ಟಿಕೊಳ್ಳಲು ಅವಕಾಶ ನೀಡಬೇಕು. ಸಂಬಂಧಿತ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಖಾತೆ ಮಾಡಿ, ನೊಂದ ಬಡವರಿಗೆ ನ್ಯಾಯ ಒದಗಿಸಬೇಕು ಎಂದು ವಸತಿರಹಿತರು ಮನವಿ ಮಾಡಿದರು.

ಧರಣಿಯಲ್ಲಿ ರಾಮನಾಥಪುರ ಗ್ರಾಮದ ಲಕ್ಷ್ಮೀ, ಮಧು, ಅಮಾನುಲ್ಲ ಖಾನ್, ಗಣೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ನಗರದ ಸಮಗ್ರ ಅಭಿವೃದ್ಧಿಗೆ ವಿಶೇಷ ಆದ್ಯತೆ

ದೇವಾಲಯ ಅಭಿವೃದ್ಧಿಗೆ ₹23 ಲಕ್ಷದ ವಿವಿಧ ಕಾಮಗಾರಿಗೆ ಶಾಸಕ ಎಚ್.ಪಿ. ಸ್ವರೂಪ್ ಭೂಮಿಪೂಜೆ

• **ಕನ್ನಡಪ್ರಭ ವಾರ್ತೆ** ಹಾಸನ

ಹಾಸನ ಮಹಾನಗರ ಪಾಲಿಕೆಯ ಅನುದಾನದಡಿ ನಗರದ 29 ನೇ ವಾರ್ಡ್ ಹುಣಸಿನಕೆರೆ ಬಡಾವಣೆಯಲ್ಲಿರುವ ಶ್ರೀ ಕಾಶಿ ವಿಶ್ವನಾಥ ದೇವಾಲಯದ 23 ಲಕ್ಷದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಸ್ವರೂಪ್ ಪ್ರಕಾಶ್ ಗುರುವಾರ ಭೂಮಿಪೂಜೆ ನೆರವೇರಿಸಿ ಶಂಕುಸ್ಥಾಪನೆ ಮಾಡಿದರು.

ಶಂಕುಸ್ಥಾಪನೆ ಬಳಿಕ ಶಾಸಕರು ಮಾತನಾಡಿ, 23 ಲಕ್ಷ ರುಪಾಯಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿರುವ ಈ ಅಭಿವೃದ್ಧಿ ಕಾಮಗಾರಿಗಳು ದೇವಾಲಯದ ಸೌಲಭ್ಯಗಳನ್ನು ವಿಸ್ತರಿಸುವುದರ ಜೊತೆಗೆ ಬಡಾವಣೆಯ ಅಭಿವೃದ್ಧಿಗೂ ಸಹಕಾರಿಯಾಗಲಿವೆ. ಹಾಸನ ನಗರ ಮಹಾನಗರಪಾಲಿಕೆಯಾಗಿರುವ ಹಿನ್ನೆಲೆಯಲ್ಲಿ ನಗರದ ಪ್ರತಿಯೊಂದು ವಾರ್ಡ್‌ಗೂ ಸಮಾನವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ತಲುಪಿಸುವ ನಿಟ್ಟನಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ. ರಸ್ತೆ, ಚರಂಡಿ, ಕುಡಿಯುವ ನೀರು, ಬೀದಿದೀಪ, ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದರು.

ನಗರದಲ್ಲಿ ವೇಗವಾಗಿ ಬೆಳೆಯುತ್ತಿರುವ ಬಡಾವಣೆಗಳಲ್ಲಿ ಜನರಿಗೆ ಮೂಲಭೂತ ಸೌಕರ್ಯಗಳ ಕೊರತೆ ಉಂಟಾಗದಂತೆ ವಿಶೇಷನಿಗಾ ವಹಿಸಲಾಗುತ್ತಿದೆ. ಹುಣಸಿನಕೆರೆ ಬಡಾವಣೆಯಲ್ಲಿಯೂ ಹಲವು ವರ್ಷಗಳಿಂದ ಸಾರ್ವಜನಿಕರು ಮತ್ತು ದೇವಾಲಯದ ಭಕ್ತರು ಅಭಿವೃದ್ಧಿ ಕಾಮಗಾರಿಗಳ ಬೇಡಿಕೆ ಇಟ್ಟಿದ್ದು, ಅದಕ್ಕೆ ಸ್ಪಂದಿಸಿ ಮಹಾನಗರಪಾಲಿಕೆ ಅನುದಾನದಡಿ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು.



ದೇವಾಲಯಗಳು ಕೇವಲ ಪೂಜಾ ಕೇಂದ್ರಗಳಷ್ಟೇ ಅಲ್ಲದೆ ಸಮಾಜದ ಸಂಸ್ಕೃತಿ, ಪರಂಪರೆ ಮತ್ತು ಜನರ ನಂಬಿಕೆಯ ಪ್ರತೀಕಗಳಾಗಿವೆ. ಇಂತಹ ಧಾರ್ಮಿಕ ಕೇಂದ್ರಗಳ ಅಭಿವೃದ್ಧಿಯಿಂದ ಸ್ಥಳೀಯ ಜನರಲ್ಲಿ ಆತ್ಮೀಯತೆ ಹಾಗೂ ಸಾಮಾಜಿಕ ಬಾಂಧವ್ಯ ಹೆಚ್ಚುತ್ತದೆ. ಶ್ರೀ ಕಾಶಿ ವಿಶ್ವನಾಥ ದೇವಾಲಯಕ್ಕೆ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದು, ಇಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಅಗತ್ಯವಾಗಿತ್ತು ಎಂದು ಅವರು ತಿಳಿಸಿದರು.

ಸುಮಾರು 23 ಲಕ್ಷ ರೂಪಾಯಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿರುವ ಕಾಮಗಾರಿಗಳಲ್ಲಿ ದೇವಾಲಯ ಆವರಣ ಅಭಿವೃದ್ಧಿ, ಕಾಂಕ್ರೀಟ್ ರಸ್ತೆ, ಚರಂಡಿ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ಹಾಗೂ ಇತರೆ ಅಗತ್ಯ ಸೌಲಭ್ಯಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಕಾಮಗಾರಿಗಳನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ನಗರದ ಸಮಗ್ರ ಅಭಿವೃದ್ಧಿಗೆ ಸರ್ಕಾರದಿಂದ ಹೆಚ್ಚಿನ ಅನುದಾನ ತರಲು ಪ್ರಯತ್ನಿಸಲಾಗುತ್ತಿದೆ. ಹಾಸನ ನಗರ ಮುಂದಿನ ದಿನಗಳಲ್ಲಿ ಮಾದರಿ ನಗರವಾಗಿ ರೂಪುಗೊಳ್ಳಬೇಕು ಎಂಬ ಉದ್ದೇಶದಿಂದ ಅಭಿವೃದ್ಧಿ ಕಾಮಗಾರಿಗಳನ್ನು ಯೋಜಿತ ರೀತಿಯಲ್ಲಿ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಹಲವು ವರ್ಷಗಳಿಂದ ದೇವಾಲಯದ ಅಭಿವೃದ್ಧಿಗೆ ಬೇಡಿಕೆ ಇಟ್ಟಿದ್ದರೂ ಕಾಮಗಾರಿ ಕೈಗೆತ್ತಿಕೊಳ್ಳಲಾಗಿರಲಿಲ್ಲ. ಇದೀಗ ಶಾಸಕ ಸ್ವರೂಪ್ ಪ್ರಕಾಶ್ ಅವರು ಅನುದಾನ ಬಿಡುಗಡೆ ಮಾಡಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿರುವುದು ಸಂತಸದ ವಿಚಾರ ಎಂದು ಭಕ್ತರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಮುಖಂಡರು, ಮಹಾನಗರಪಾಲಿಕೆ ಸದಸ್ಯರು, ಸ್ಥಳೀಯ ಜನಪ್ರತಿನಿಧಿಗಳು, ಬಡಾವಣೆಯ ಹಿರಿಯರು, ಮಹಿಳೆಯರು, ಯುವಕರು ಹಾಗೂ ದೇವಾಲಯದ ಭಕ್ತರು ಉಪಸ್ಥಿತರಿದ್ದರು.


ಕಸಾಯಿಖಾನೆಗೆ ಸಾಗಿಸುತ್ತಿದ್ದ 17 ಜಾನುವಾರುಗಳ ರಕ್ಷಣೆ

ಅರಸೀಕೆರೆಯ ಕಸ್ತೂರ ಬಾ ಗೋ ಶಾಲೆಗೆ ರವಾನೆ

• **ಕನ್ನಡಪ್ರಭ ವಾರ್ತೆ** ಬೇಲೂರು

ಕಸಾಯಿಖಾನೆಗೆ ಸಾಗಿಸುತ್ತಿದ್ದ 17 ಗೋವುಗಳನ್ನು ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗದಳದ ಯಶಸ್ವಿ ಕಾರ್ಯಾಚರಣೆ ನಡೆಸಿ ರಕ್ಷಣೆ ಮಾಡಲಾಗಿದೆ.

ತಾಲೂಕಿನ ಹನಿಕೆ ಗ್ರಾಮದಲ್ಲಿ ಅಕ್ರಮವಾಗಿ ಗೋವುಗಳನ್ನು ಬಂಧಿಸಿಟ್ಟು, ಅಲ್ಲಿಂದ ಕಸಾಯಿಖಾನೆಗೆ ಸಾಗಿಸಲು ಸಿದ್ಧತೆ ನಡೆಸುತ್ತಿದ್ದ ಜಾಲವನ್ನು ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ಕಾರ್ಯಕರ್ತರು ಪತ್ತೆಹಚ್ಚಿ, 17 ಗೋವುಗಳನ್ನು ರಕ್ಷಿಸುವಲ್ಲಿ ಯಶಸ್ವಿಯಾಗಿದ್ದಾರೆ. ಹನಿಕೆ ಗ್ರಾಮದ ಎಪಿಎಂಸಿ ಆವರಣದಲ್ಲಿ ಗೋವುಗಳನ್ನು ಅಕ್ರಮವಾಗಿ ಸಾಗಾಣಿಕೆ ಮಾಡಲು ಗೋವುಗಳನ್ನು ಕಟ್ಟಿ ಹಾಕಲಾಗಿದ್ದು, ಇವುಗಳನ್ನು ಮಾಂಸಕ್ಕಾಗಿ ಸಾಗಿಸಲಾಗುತ್ತಿದೆ ಎಂಬ ಖಚಿತ ಮಾಹಿತಿ ಸಂಘಟನೆಯ ಕಾರ್ಯ ಕರ್ತರಿಗೆ ಲಭಿಸಿತ್ತು. ತಕ್ಷಣವೇ ಕಾರ್ಯಪ್ರವೃತ್ತರಾದ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳ ಬೇಲೂರು ಪ್ರಖಂಡದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸ್ಥಳಕ್ಕೆ ಭೇಟಿ ನೀಡಿ ಸುಮಾರು ಹದಿನೇಳು ಗೋವುಗಳನ್ನು ಕಾರ್ಯಕರ್ತರು ರಕ್ಷಿಸಿ ಗೋವುಗಳನ್ನು ಅರಸೀಕೆರೆಯ ಕಸ್ತೂರ ಬಾ ಗೋಶಾಲೆಗೆ ಸುರಕ್ಷಿತವಾಗಿ ಬಿಡಲಾಗಿದೆ.



ವಿಶ್ವ ಹಿಂದೂ ಪರಿಷತ್ ತಾಲೂಕು ಅಧ್ಯಕ್ಷ ಭರತ್ ಬಿರಡಹಳ್ಳಿ ಮಾತನಾಡಿ, ತಾಲೂಕಿನಲ್ಲಿ ಅಕ್ರಮ ಗೋ ಸಾಗಾಟ ಜಾಲ ಸಕ್ರಿಯವಾಗಿರುವ ಬಗ್ಗೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದು, ಅಕ್ರಮವಾಗಿ ಗೋವು ಗಳನ್ನು ಕಸಾಯಿಖಾನೆಗೆ ಸಾಗಿಸುವ ದಂಧೆಯ ವಿರುದ್ಧ ನಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದು ಇದೇ ವೇಳೆ ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ವೃತ್ತಿ ಕೌಶಲ್ಯದ ಬಗ್ಗೆಯೂ ತಿಳಿದುಕೊಳ್ಳಿ

ವಿಶೇಷ ಉಪನ್ಯಾಸದಲ್ಲಿ ಡಾ. ರಾಜಶೇಖರ್ ಸಲಹೆ



• **ಕನ್ನಡಪ್ರಭ ವಾರ್ತೆ** ಹಾಸನ

ವಿದ್ಯಾರ್ಥಿಗಳು ವೃತ್ತಿ ಕೌಶಲ್ಯ ಹಾಗೂ ಎಐ ಬಗ್ಗೆ ತಿಳಿದುಕೊಂಡರೆ ವಿದ್ಯಾಭ್ಯಾಸದ ನಂತರ ಕೆಲಸ ಪಡೆದುಕೊಳ್ಳಲು ಸಹಕಾರಿಯಾಗಲಿದೆ ಎಂದು ರಾಜೀವ್ ತಾಂತ್ರಿಕ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ರಾಜಶೇಖರ್ ಹೇಳಿದರು.

ನಗರದ ಆರ್.ಸಿ. ರಸ್ತೆ ಗಂಧದಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿರ್ವಹಣಾಶಾಸ್ತ್ರ ವಿಭಾಗದ ವತಿಯಿಂದ ಬಿ.ಬಿ.ಎ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ಜಾಗತಿಕ ಯುಗದಲ್ಲಿ ಕೇವಲ ಪಠ್ಯ ಜ್ಞಾನ ಸಾಲದು, ಪ್ರಾಯೋಗಿಕ ಕೌಶಲ್ಯಗಳು ಉತ್ತಮ ಸಂವಾಹನ ಮತ್ತು ನಿರ್ಧಾರ ಸಾಮರ್ಥ್ಯ ಅಗತ್ಯ. ವ್ಯವಹಾರಿಕ ಕ್ಷೇತ್ರದಲ್ಲಿ ಬಿಬಿಎ ವಿದ್ಯಾರ್ಥಿಗಳು ಹೆಚ್ಚಾಗಿ ತೊಡಗಿಕೊಳ್ಳುವುದರಿಂದ ಯಾವುದೇ ಉದ್ಯಮವನ್ನು ಆರಂಭಿಸುವ ಮೊದಲು ಸರಿಯಾದ ಯೋಜನೆ ಮಾಡುವುದು, ಅತ್ಯಂತ ಮುಖ್ಯ. ಎಂಬಿಎ ವ್ಯವಹಾರ ನಿರ್ವಹಣೆಯಲ್ಲಿನ ಉನ್ನತ ಶಿಕ್ಷಣವಾಗಿದ್ದು, ವಿದ್ಯಾರ್ಥಿಗಳಿಗೆ ನಿರ್ವಹಣಾ ಕೌಶಲ್ಯಗಳು ಮತ್ತು ನಾಯಕತ್ವ ಗುಣಗಳನ್ನು ಅಭಿವೃದ್ಧಿ ಪಡಿಸಲು ಸಹಾಯ ಮಾಡುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಜೀವ್ ಸಂಸ್ಥೆಯ ಶೋಭ ಮಾತನಾಡಿ, ಹೆಣ್ಣು ಮಕ್ಕಳು ಯಾರ ಮೇಲು ಅವಲಂಬಿತರಾಗದೆ ತಮ್ಮ ಜೀವನವನ್ನು ತಾವೇ ನಿರ್ಮಿಸಿಕೊಳ್ಳಬೇಕು. ಶಿಕ್ಷಣ ಮತ್ತು ಆತ್ಮವಿಶ್ವಾಸದ ಮೂಲಕ ಅವರು ತಮ್ಮ ಗುರಿಗಳನ್ನು ಸಾಧಿಸಬಹುದು. ವೃತ್ತಿ ಕೌಶಲ್ಯಗಳು ವಿದ್ಯಾರ್ಥಿಗಳಲ್ಲಿ ಸ್ಪಷ್ಟವಾಗಿ ಆಲೋಚನೆಗಳನ್ನು ವ್ಯಕ್ತಪಡಿಸಲು ಸಹಕಾರಿ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಕೌಶಲ್ಯಗಳನ್ನು ಬೆಳೆಸಿಕೊಂಡು, ಹೊಸ ತಂತ್ರಜ್ಞಾನಗಳನ್ನು ಕಲಿತು ಸವಾಲುಗಳನ್ನು ಎದುರಿಸಲು ಸಿದ್ದರಾಗಬೇಕು ಎಂದು ಹೇಳಿದರು. ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಅಧ್ಯಕ್ಷತೆ ವಹಿಸಿದ್ದರು, ನಿರ್ವಹಣಾ ಶಾಸ್ತ್ರ ವಿಭಾಗದ ಉಪನ್ಯಾಸಕರಾದ ಡಾ. ಸ್ವಪ್ನ ಜಿ. ಆರ್, ತಬ್ರೆಜ್, ಯೋಗೇಶ್, ಅತೀಥ್ ಹಾಗೂ ಇತರರು ಹಾಜರಿದ್ದರು.

11ರಂದು ಬುಡಕಟ್ಟುಗಳ ಆಯೋಗದ ಅಧ್ಯಕ್ಷರು, ಸದಸ್ಯರ ಪ್ರವಾಸ

ಹಾಸನ: ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧ್ಯಕ್ಷರಾದ ಡಾ. ಮೂರ್ತಿ ಎಲ್ ಹಾಗೂ ಸದಸ್ಯರಾದ ಎಂ. ಕುಂಬಯ್ಯ, ಸುನೀಲ್ ಎಂ ಉಕ್ಕಲಿ, ಎನ್. ದಿವಾಕರ್, ಮತ್ತು ಗೀತಾ ಥಾಂವಶಿ ಹಾಗೂ ಕಾರ್ಯದರ್ಶಿಗಳಾದ ಡಾ. ಎಚ್. ಎಸ್ ಶಿವರಾಮು ಅವರು ಮೇ.11 ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಮಾಡಲಿರುವರು. ಅಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳು, ಪೊಲೀಸ್ ಅಧೀಕ್ಷಕರು ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸಂಘ ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸಭೆ, ಅಹವಾಲು ಸ್ವೀಕಾರ ಹಾಗೂ ಕುಂದುಕೊರತೆ ಸಭೆ ನಡೆಸಲಿದ್ದಾರೆ, ಮಧ್ಯಾಹ್ನ 2.15ಕ್ಕೆ ಪತ್ರಿಕಾಗೋಷ್ಠಿಯನ್ನು ನಡೆಸಲಿದ್ದಾರೆ ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳೊಂದಿಗೆ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ನಡೆಸಲಿದ್ದಾರೆ.

ಅಭಿನಂದನೆ | ಶಾಸಕ ಬಾಲಕೃಷ್ಣ ಸಲಹೆ ಸಹಕಾರ ಪಡೆದು ಸೊಸೈಟಿ ಅಭಿವೃದ್ಧಿಪಡಿಸುವ ಭರವಸೆ

ಜನಿವಾರ ಕೃಷಿಪತ್ತಿನ ಸಂಘಕ್ಕೆ ಅಧ್ಯಕ್ಷರಾಗಿ ಪ್ರಸನ್ನ ಆಯ್ಕೆ

• **ಕನ್ನಡಪ್ರಭ ವಾರ್ತೆ** ಚನ್ನರಾಯಪಟ್ಟಣ

ತಾಲೂಕಿನ ಕಸಬಾ ಹೋಬಳಿ ಜನಿವಾರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಗುರುವಾರದಂದು ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ನಿರ್ದೇಶರು ಹಾಗೂ ಜೆಡಿಎಸ್ ಪಕ್ಷದ ಮುಖಂಡರು ಆದ ಜನಿವಾರ ಗ್ರಾಮದ ಜೆ ಕೆ ಪ್ರಸನ್ನ ಅವರು ಅವಿರೋಧವಾಗಿ ಆಯ್ಕೆಯಾದರು.



ಜನಿವಾರ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘಕ್ಕೆ ಈ ಹಿಂದೆ ಅಧ್ಯಕ್ಷರಾಗಿದ್ದ ಮಖಾನ್ ಶಿವಕುಮಾರ್ ಅವರು ರಾಜೀನಾಮೆ ನೀಡಿದ್ದರಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಿತು. ಜನಿವಾರ ಗ್ರಾಮದ ಯುವ ಜೆಡಿಎಸ್ ಮುಖಂಡ ಪ್ರಸನ್ನ ಹೊರತುಪಡಿಸಿ ಬೇರೆ ಯಾವ ನಿರ್ದೇಶಕರು ನಾಮಪತ್ರ ಸಲ್ಲಿಸದೆ ಇದ್ದುದ್ದರಿಂದ ಇವರ ಆಯ್ಕೆಯನ್ನು ಚುನಾವಣಾಧಿಕಾರಿ ವಿಜಯೇಂದ್ರ ಘೋಷಿಸಿದರು.

ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಪ್ರಸನ್ನ ಮಾತನಾಡಿ, ನನ್ನನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲು ಕಾರಣಕರ್ತರಾದ ಶಾಸಕರಾದ ಸಿಎನ್ ಬಾಲಕೃಷ್ಣರವರಿಗೆ, ಕರ್ನಾಟಕ ಸಹಕಾರ ಮಾರಾಟ ಮಂಡಳಿಯ ನಿರ್ದೇಶಕರಾದಸಿಎನ್ ಪುಟ್ಟಸ್ವಾಮಿಗೌಡರಿಗೆ ಹಾಗೂ ನಮ್ಮ ಆಡಳಿತ ಮಂಡಳಿಯ ಎಲ್ಲಾ ನಿರ್ದೇಶಕರುಗಳಿಗೂ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುವುದಾಗಿ ತಿಳಿಸಿದರು. ಮುಂಬರುವ ದಿನಗಳಲ್ಲಿ ಹೊಸ ರೈತರಿಗೆ ಸಾಲ ನೀಡಲು ಕ್ಷೇತ್ರದ ಶಾಸಕರಾದ ಸಿಎನ್ ಬಾಲಕೃಷ್ಣ ಮತ್ತು ಕರ್ನಾಟಕ ಫೆಡರೇಶನ್ ನಿರ್ದೇಶಕರಾದ ಸಿ ಎನ್ ಪುಟ್ಟಸ್ವಾಮಿಗೌಡರವರ ಸಹಕಾರ ಕೋರಲಾಗುವುದು ಎಂದರು.

ಜೊತೆಗೆ ಸಂಘದ ಬಲವರ್ಧನೆಗೆ ಹೆಚ್ಚು ಶ್ರಮಿಸುವುದಾಗಿ ತಿಳಿಸಿದ ಅವರು ತಮ್ಮನ್ನು ಸಂಘಕ್ಕೆ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದ ಸಂಘದ ನಿಕಟಪೂರ್ವ ಅಧ್ಯಕ್ಷರು, ಉಪಾಧ್ಯಕ್ಷರು, ಸೇರಿ ಎಲ್ಲ ನಿರ್ದೇಶಕರು ಮತ್ತು ಆಶೀರ್ವದಿಸಿದ ಸ್ಥಳೀಯ ಶಾಸಕರಾದ ಬಾಲಕೃಷ್ಣ ಹಾಗೂ ಕುಸುಮ ಬಾಲಕೃಷ್ಣ ಅವರಿಗೆ ತುಂಬು ಹೃದಯದ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು. ಇದೇ ಸಂದರ್ಭದಲ್ಲಿ ಮಾಜಿ ಅಧ್ಯಕ್ಷರಾದ ಕುಂಬಾರಹಳ್ಳಿ ರಮೇಶ್ ಮಾತನಾಡಿ , ನೂತನ ಅಧ್ಯಕ್ಷರು ಶಾಸಕರಾದ ಬಾಲಕೃಷ್ಣ ಅವರ ಸಲಹೆ ಸಹಕಾರ ಪಡೆದು ಸೊಸೈಟಿಯನ್ನು ಅಭಿವೃದ್ಧಿಪಡಿಸಲಿ ಎಂದು ಮಾರ್ಗದರ್ಶನ ನೀಡಿದರು.

ಬರಾಳು ಮಹೇಂದ್ರ ಮಾತನಾಡಿ ನೂತನ ಅಧ್ಯಕ್ಷರಾದ ಪ್ರಸನ್ನ ಅವರು ಎಲ್ಲಾ ನಿರ್ದೇಶಕರೊಂದಿಗೆ ಹೊಂದಾಣಿಕೆಯಿಂದ ಆಡಳಿತ ನಡೆಸಲಿ ಹಾಗೂ ಜನಿವಾರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವನ್ನು ತಾಲೂಕಿನಲ್ಲಿ ಮಾದರಿ ಸೊಸೈಟಿ ಮಾಡಲು ಶ್ರಮಿಸಲಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಟಿಎಪಿಸಿಎಂಎಸ್ ಅಧ್ಯಕ್ಷರಾದ ಮೆಡಿಕಲ್ ವೆಂಕಟೇಶ್, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರಾದ ಕುಂಬಾರಹಳ್ಳಿ ರಮೇಶ್, ಟಿಎಪಿಎಂಎಸ್‌ನ ನಿರ್ದೇಶಕರಾದ ಸುರೇಶ್, ಜೆಡಿಎಸ್ ಮುಖಂಡರಾದ ಬರಾಳು ಮಹೇಂದ್ರ, ಗೋವಿನಕೆರೆ ಸುರೇಶ್ ರಮೇಶ್, ಹೊಂಗ್ಗೆಹಳ್ಳಿ ರಾಮಕಷ್ಣ, ಜನಿವಾರ ಸೊಸೈಟಿ ಮಾಜಿ ಅಧ್ಯಕ್ಷರಾದ ಮಖಾನ್ ಶಿವು, ಜನಿವಾರ ಕಾಳೇಗೌಡ, ಜೆ ಎಚ್ ಮಂಜುನಾಥ್, ಜೆ ಆರ್ ರಮೇಶ್, ನಿರ್ದೇಶಕರುಗಳಾದ ನಾಗರಾಜು, ಕಾಂತರಾಜು, ಜೆ ಕೆ ಕುಮಾರ್, ಪರಮೇಶ, ರಾಮಚಂದ್ರನಾಯಕ್, ವಿಜಯಮೋಹನ್, ಪದ್ಮಪ್ರಕಾಶ್, ಗ್ರಾಮ ಪಂಚಾಯಿತಿ ಮಾಜಿ ಸದಸ್ಯರಾದ ಜೆ ಪಿ ಸತೀಶ್, ಜನಿವಾರ ಗ್ರಾಮದ ಮುಖಂಡರಾದ ಜೆ ಆರ್ ನಂಜೇಗೌಡ, ಎಚ್‌ಡಿಸಿ ಬ್ಯಾಂಕ್ ವಿಸ್ತರಣಾಧಿಕಾರಿಗಳಾದ ಮಧು, ಸೊಸೈಟಿ ಕಾರ್ಯ ನಿರ್ವಹಣಾಧಿಕಾರಿಗಳಾದ ಶೀಲಾ ಮಂಜುನಾಥ್, ಸೊಸೈಟಿ ಸಹಾಯಕಿಯಾದ ಮಾನಸ, ನಂಜಪ್ಪ ಇತರರು ಹಾಜರಿದ್ದರು.

ಸುದ್ದಿ ಸಿಂಚನ

ಮದ್ಯಪಾನಿಗಳ ಅಡ್ಡ ಆದ ಶಾಲಾ ಮೈದಾನ: ಆಕ್ರೋಶ



ಬೇಲೂರು: ಪಟ್ಟಣದ ಜೂನಿಯರ್ ಕಾಲೇಜು ಮೈದಾನವು ದಿನದಿಂದ ದಿನಕ್ಕೆ ತನ್ನ ಮೂಲ ಉದ್ದೇಶ ಕಳೆದುಕೊಂಡು ಮದ್ಯಪಾನಿಗಳ ಅಡ್ಡವಾಗಿದ್ದು ಅನೈತಿಕ ಚಟುವಟಿಕೆಗಳ ತಾಣವಾಗುತ್ತಿದೆ ಎಂದು ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಸಾಮಾಜಿಕ ಹೋರಾಟಗಾರ ಡಿ.ಕೆ. ವೆಂಕಟೇಶ್ ಈ ಕುರಿತು ಮಾತನಾಡಿ, ಈ ಜಾಗವು ಶಾಲಾ ಮಕ್ಕಳ ಆಟ, ಕ್ರೀಡಾ ಚಟುವಟಿಕೆಗಳು, ಸಾರ್ವಜನಿಕ ಸಭೆಸಮಾರಂಭಗಳು ನಡೆಯುವ ಜಾಗವಾಗಿದೆ. ಆದರೆ ಈಗ ಮದ್ಯಪಾನಿಗಳ ನೆಲೆಸುವ ಕೇಂದ್ರವಾಗಿ ಮಾರ್ಪಟ್ಟಿದೆ. ರಾತ್ರಿ ವೇಳೆ ಅಸಭ್ಯ ವರ್ತನೆ, ಗದ್ದಲ, ಗಾಜಿನ ಬಾಟಲ್‌ಗಳನ್ನು ಎಸೆದು ಹೋಗುವುದು ಇತ್ಯಾದಿ ಘಟನೆಗಳು ಸಾಮಾನ್ಯವಾಗಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮೈದಾನದ ಸುತ್ತಮುತ್ತಲಿನ ನಿವಾಸಿ ಗಳು, ವಿಶೇಷವಾಗಿ ಮಹಿಳೆಯರು ಮತ್ತು ವಯೋವೃದ್ಧರು, ರಾತ್ರಿ ವೇಳೆ ಹೊರಗೆ ಬರಲು ಹೆದರುವ ಪರಿಸ್ಥಿತಿ ನಿರ್ಮಾಣವಾಗಿದೆ. ವಾಕ್ ಮಾಡಲು ಬರುವ ಮಹಿಳೆಯರಿಗೆ, ಹಿರಿಯರಿಗೆ ಇದು ಸುರಕ್ಷಿತ ಸ್ಥಳವಾಗಿಲ್ಲ. ಇಲ್ಲಿ ಬರುವ ಮದ್ಯಪಾ ನಿಕರ ವರ್ತನೆಯಿಂದ ಭಯ ಮತ್ತು ಅಸಹಜ ವಾತಾವ ರಣ ನಿರ್ಮಾಣವಾಗುತ್ತಿದೆ. ಶಾಲೆಯಲ್ಲಿ ಓದುತ್ತಿರುವ ಮಕ್ಕಳ ಭವಿಷ್ಯದ ಮೇಲೂ ಈ ಪರಿಸ್ಥಿತಿ ದುಷ್ಪರಿಣಾಮ ಬೀರುತ್ತಿದೆ. ದಿನನಿತ್ಯ ಶಾಲೆಗೆ ಬರುವ ವಿದ್ಯಾರ್ಥಿಗಳು, ವಿಶೇಷವಾಗಿ ಹೆಣ್ಣುಮಕ್ಕಳು, ಈ ರೀತಿಯ ಅಸಭ್ಯ ಪರಿಸರವನ್ನು ನೋಡುತ್ತ ಬೆಳೆವಂತಾಗಿರುವುದು ಪೋಷ ಕರಲ್ಲಿ ಆತಂಕ ಹುಟ್ಟಿಸಿದೆ. ಇದು ಶಾಲಾ ಮೈದಾ ನವು ಅಥವಾ ಡಾಬಾನೋ ಎಂಬ ಗೊಂದಲವೇ ಸಾರ್ವಜನಿ ಕರಲ್ಲಿ ಮೂಡಿದೆ ಎಂದು ಕಿಡಿಕಾರಿದ್ದಾರೆ. ಇದನ್ನು ತಡೆಯಲು ಶಾಶ್ವತ ಪರಿಹಾರವಾಗಿ ಮೈದಾನಕ್ಕೆ ಸಂಪೂರ್ಣ ತಡೆಗೋಡೆ ನಿರ್ಮಿಸಿ, ನಿಯಂತ್ರಿತ ಪ್ರವೇಶದೊಂದಿಗೆ ಗೇಟ್ ಅಳವಡಿಸುವುದು ಅತ್ಯಾವಶ್ಯ ಕವಾಗಿದೆ. ಈ ಕುರಿತು ಈಗಾಗಲೇ ಸ್ಥಳೀಯ ಶಾಸಕರು ತಡೆಗೋಡೆ ನಿರ್ಮಿಸುವುದಾಗಿ ಭರವಸೆ ನೀಡಿದ್ದು, ಅದನ್ನು ಶೀಘ್ರ ಜಾರಿಗೆ ತರುವಂತೆ ಅವರು ಆಗ್ರಹಿಸಿ ದ್ದಾರೆ. ಇದಲ್ಲದೆ, ಪೊಲೀಸ್ ಇಲಾಖೆ ಹಾಗೂ ಪುರಸಭೆ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು, ರಾತ್ರಿ ವೇಳೆ ಅಕ್ರಮವಾಗಿ ಮದ್ಯಪಾನ ಮಾಡುವವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು. ನಿಯಮಿತ ಪೆಟ್ರೋ ಲಿಂಗ್ ವ್ಯವಸ್ಥೆ ಮಾಡುವುದು, ಸಿಸಿಟಿವಿ ಕ್ಯಾಮೆರಾ ಗಳನ್ನು ಅಳವಡಿಸುವುದು ಹಾಗೂ ಸಾರ್ವಜನಿಕ ಸ್ಥಳದ ಗೌರವ ಕಾಪಾಡುವ ದಿಕ್ಕಿನಲ್ಲಿ ಸ್ಪಷ್ಟ ಕ್ರಮ ತೆಗೆದು ಕೊಳ್ಳಬೇಕಾಗಿದೆ ಎಂದು ಅವರು ಒತ್ತಾಯಿಸಿ ದ್ದಾರೆ. ಶಾಲಾ ಮೈದಾನವು ಮಕ್ಕಳ ಭವಿಷ್ಯ ರೂಪಿಸುವ ಪವಿತ್ರ ಸ್ಥಳವಾ ಗಿರಬೇಕು. ಅದನ್ನು ಮದ್ಯಪಾನಿಗಳ ಅಡ್ಡಾವಾಗಿ ಬಿಡುವುದು ಸಮಾಜದ ದೊಡ್ಡ ವಿಫಲತೆ. ತಕ್ಷಣ ಕ್ರಮ ಕೈಗೊಂಡರೆ ಮಾತ್ರ ಈ ಪರಿಸ್ಥಿತಿ ನಿಯಂತ್ರಣಕ್ಕೆ ಬರುತ್ತದೆ'' ಎಂದು ಡಿ. ಕೆ. ವೆಂಕಟೇಶ್ ಎಚ್ಚರಿಸಿದ್ದಾರೆ.

ದೇವಾಲಯಗಳ ಜೀರ್ಣೋದ್ಧಾರಕ್ಕೆ ಅನುದಾನ

ಹುಲ್ಲೇನಹಳ್ಳಿಯ ಅಂಬೇಡ್ಕರ್ ಸಮುದಾಯ ಭವನ ನವೀಕರಣಕ್ಕೆ ₹ 30 ಲಕ್ಷ ಅನುದಾನ: ಶಾಸಕ ಸಿ. ಎನ್. ಬಾಲಕೃಷ್ಣ ಭರವಸೆ

• **ಕನ್ನಡಪ್ರಭ ವಾರ್ತೆ** ನುಗ್ಗೇಹಳ್ಳಿ

ಹೋಬಳಿಯ ಹುಲ್ಲೇನಹಳ್ಳಿ ಗ್ರಾಮದ ಅಂಬೇಡ್ಕರ್ ಸಮುದಾಯ ಭವನ ಊಟದ ಮನೆ ಸೇರಿದಂತೆ ವಿವಿಧ ಅಭಿವೃದ್ಧಿ ಕೆಲಸಗಳಿಗೆ ಮುಂದಿನ ಜುಲೈನಲ್ಲಿ 30 ಲಕ್ಷ ಅನುದಾನ ಕೊಡುವುದಾಗಿ ಶಾಸಕ ಸಿ. ಎನ್. ಬಾಲಕೃಷ್ಣ ತಿಳಿಸಿದರು.

ಹೋಬಳಿಯ ಹುಲ್ಲೇನಹಳ್ಳಿ ಗ್ರಾಮದ ಶ್ರೀ ರೇಣುಕಾ ಎಲ್ಲಮ್ಮ ದೇವಿಯವರ ನೂತನ ವಿಮಾನ ಗೋಪುರ ಹಾಗೂ ಗೋಪುರ ಕಳಶ ರೋಹಣ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಗ್ರಾಮದ ರೇಣುಕಾ ಎಲ್ಲಮ್ಮ ದೇವಿ ಚಿಕ್ಕಮ್ಮ ದೇವಿ ಈಶ್ವರ ದೇವಾಲಯ ಸೇರದಂತೆ ವಿವಿಧ ದೇವಾಲಯಗಳ ಜೀರ್ಣೋದ್ಧಾರಕ್ಕೆಹೆಚ್ಚಿನಅನುದಾನನೀಡಲಾಗಿದೆ. ಈಗಾಗಲೇ ಗ್ರಾಮದಲ್ಲಿ ಅಂಬೇಡ್ಕರ್‌ಭವನ ನಿರ್ಮಾಣಗೊಂಡಿದೆ ಜೊತೆಗೆ ಹೆಚ್ಚುರಿಯಾಗಿ ಅಡುಗೆ ಮನೆ ಊಟದ ಹಾಲ್ ಸೇರಿದಂತೆ ವಿವಿಧ ಅಭಿವೃದ್ಧಿ ಕೆಲಸಗಳಿಗೆ 30 ಲಕ್ಷ ಅನುದಾನವನ್ನು ಜುಲೈನಲ್ಲಿ ಕೊಡುವುದಾಗಿ ಭರವಸೆ ನೀಡಿದರು.



ನುಗ್ಗೇಹಳ್ಳಿ ಹೋಬಳಿಯ ಹುಲ್ಲೇನಹಳ್ಳಿ ಗ್ರಾಮದ ಶ್ರೀ ರೇಣುಕಾ ಎಲ್ಲಮ್ಮ ದೇವಿಯವರ ನೂತನ ವಿಮಾನ ಗೋಪುರ ಹಾಗೂ ಗೋಪುರ ಕಳಶ ರೋಹಣ ಪೂಜಾ ಕಾರ್ಯಕ್ರಮದಲ್ಲಿ ಶಾಸಕ ಸಿ ಎನ್ ಬಾಲಕೃಷ್ಣ ಪಾಲ್ಗೊಂಡು ದೇವರಿಗೆ ಪೂಜೆ ಸಲ್ಲಿಸಿದರು.

ಟಿಸಿ ರಸ್ತೆಯಿಂದ ಕಿರು ಆರೋಗ್ಯ ಕಟ್ಟಡದವರೆಗಿನ ರಸ್ತೆ ಅಭಿವೃದ್ಧಿಗೆ ಮುಂಬರುವ ದಿನಗಳಲ್ಲಿ ಆದ್ಯತೆ ನೀಡಲಾಗುತ್ತದೆ ಈಗಾಗಲೇ 65 ಲಕ್ಷ ಆರೋಗ್ಯ ಕಟ್ಟಡ ನಿರ್ಮಾಣಗೊಳ್ಳುತ್ತಿದೆ ಇದರ ಜೊತೆಗೆ ಗ್ರಾಮದ ವಿವಿಧ ಬಡಾವಣೆಗಳ ರಸ್ತೆ ಒಳಚರಂಡಿ ವ್ಯವಸ್ಥೆಗೆ ಅನುದಾನ ಒದಗಿಸಲಾಗಿದೆ ಎಂದರು.

ಗ್ರಾಮದ ಕೆರೆಯನ್ನು ರಾಯಸಮುದ್ರ ಕಾವಲು ಕೆರೆಯಿಂದ ಪೈಪ್‌ಲೈನ್ ಮೂಲಕ ಮೋಟಾರ್ ಅಳವಡಿಸಿ ಸುಮಾರು 14 ಲಕ್ಷ ರು. ವೆಚ್ಚದಲ್ಲಿ ಈಗಾಗಲೇ ಕಾಮಗಾರಿ ಪೂರ್ಣಗೊಳಿಸಿ ಕಳೆದ ವರ್ಷ ಹಂಗಾಮಿನಲ್ಲಿ ಪ್ರಯೋಗಿಕವಾಗಿ ನೀರು ಹರಿಸಲಾಗಿದೆ ಬಾಕಿ ಉಳಿದಿರುವ ಪೈಪ್ ಲೈನ್ ಕಾಮಗಾರಿಯನ್ನು ಪೂರ್ಣಗೊಳಿಸುವ ಮೂಲಕ ಈ ಬಾರಿಯ ಹಂಗಾಮಿನಲ್ಲಿ ಕೆರೆಯನ್ನು ಸಂಪೂರ್ಣವಾಗಿ ತುಂಬಿಸಲು ಶ್ರಮ ವಹಿಸುವುದಾಗಿ ಹೇಳಿದರು. ಹಿಂದುಳಿದ ವರ್ಗ ಕಲ್ಯಾಣ ಇಲಾಖೆಗೆ ಸರ್ಕಾರ ನೀಡುವ ಅನುದಾನವನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಬಳಸುತ್ತಿರುವುದರಿಂದ ಅಭಿವೃದ್ಧಿ ಕೆಲಸಗಳಿಗೆ ಹಿನ್ನಡೆಯಾಗುತ್ತಿದೆ, ನಾನು ಗ್ಯಾರಂಟಿ ಯೋಜನೆಗಳ ಬಗ್ಗೆ ಟೀಕಿಸುವುದಿಲ್ಲ ಬದಲಾಗಿ ಬಜೆಟ್‌ನಲ್ಲಿ ಘೋಷಿಸಿರುವಂತೆ ಹಿಂದುಳಿದ ವರ್ಗಗಳ ಇಲಾಖೆಗೆ ಅನುದಾನ ನೀಡುವಂತೆ ಒತ್ತಾಯಿಸಿದರು.

ನುಗ್ಗೇಹಳ್ಳಿ ಪುರ ವರ್ಗ ಹಿರೇಮಠದ ಡಾ. ಮಹೇಶ್ವರ ಶಿವಾಚಾರ್ಯ ಸ್ವಾಮೀಜಿಯವರ ದಿವ್ಯ ಸಾನ್ನಿಧ್ಯದಲ್ಲಿ ವಿಮಾನ ಗೋಪುರ ಶಿಖರ ಕಳಸಾರೋಹಣಮತ್ತುಪೂಜಾಕಾರ್ಯಕ್ರಮಗಳು ನೆರವೇರಿತು.

ಕಾರ್ಯಕ್ರಮದಲ್ಲಿ ಮಾಜಿ ಜಿಪಂ ಉಪಾಧ್ಯಕ್ಷ ಎಚ್ ಎಂ ನಟರಾಜ್, ಎಪಿಎಂಸಿ ಮಾಜಿ ಅಧ್ಯಕ್ಷ ದೊರೆಸ್ವಾಮಿ, ತಾಪಂ ಮಾಜಿ ಸದಸ್ಯ ಪುಟ್ಟಸ್ವಾಮಿ, ಗೋಕುಲ ವಿದ್ಯಾ ಸಂಸ್ಥೆ ಕಾರ್ಯದರ್ಶಿ ನಾರಾಯಣ್, ಕೃಷಿ ಪತ್ತಿನ ಮಾಜಿ ಅಧ್ಯಕ್ಷಗಳಾದ ಎಚ್ ಬಿ ರಂಗಸ್ವಾಮಿ, ಹುಲಿಕೆರೆ ಸಂಪತ್ ಕುಮಾರ್, ಗುಡಿ ಗೌಡರುಗಳಾದ ಈರಯ್ಯ (ಅಣ್ಣಯ್ಯಪ್ಪ) ಅವ'ಾಸ'ಯ್ಯ, ರೇಣುಕಾ ಎಲ್ಲಮ್ಮ ದೇವಿ ದೇವಾಲಯದ ಅರ್ಚಕ ರಾಮಕೃಷ್ಣ, ಚಿಕ್ಕಮ್ಮ ದೇವಿ ದೇವಾಲಯದ ಅರ್ಚಕ ಗೋಪಾಲ್, ಟಿ ಎಪಿಎಂಎಸ್ ಮಾಜಿ ನಿರ್ದೇಶಕ ಎಸ್ ಚಿರಂಜೀವಿ, ಮುಖಂಡರಾದ ಎನ್ ಎಸ್ ಮಂಜುನಾಥ್, ಧರ್ಮರಾಜ್, ರಾಮಕೃಷ್ಣ, ಗಿರೀಶ್, ಬಸವರಾಜ್, ಅಮರಗಿರಿ ರಂಗನಾಥ ಸ್ವಾಮಿ ದೇವಾಲಯದ ಅರ್ಚಕ ರಂಗನಾಥ್, ಸೇರಿದಂತೆ ಶ್ರೀ ರೇಣುಕಾ ಎಲ್ಲಮ್ಮ ದೇವಿ ಹಾಗೂ ಚಿಕ್ಕಮ್ಮ ದೇವಿ ದೇವಾಲಯದ ಸಮಿತಿ ಸದಸ್ಯರು ಹಾಗೂ ಗ್ರಾಮಸ್ಥರು ಹಾಜರಿದ್ದರು.

ಕ್ಯಾಂಪಸ್ ಸಂದರ್ಶನ ಕೊಡುವ ಮೊದಲು ಸಂಸ್ಥೆ ಮಾಹಿತಿ ಇರಲಿ: ಚೇತನ್ ಕುಮಾರ್

• **ಕನ್ನಡಪ್ರಭ ವಾರ್ತೆ** ಹಾಸನ

ಯಾವುದೇ ಸಂಸ್ಥೆಗೆ ಕ್ಯಾಂಪಸ್ ಸಂದರ್ಶನ ಕೊಡುವ ಮೊದಲು ವಿದ್ಯಾರ್ಥಿಗಳು ಆ ಸಂಸ್ಥೆಯ ಬಗ್ಗೆ ಸಂಪೂರ್ಣ ಮಾಹಿತಿ ಹೊಂದುವುದು ಅತೀ ಅಗತ್ಯ. ಇದರಿಂದ ಉದ್ಯೋಗಾಕಾಂಕ್ಷಿಗಳು ದಿಕ್ಕು ತಪ್ಪುವ ಸಾಧ್ಯತೆ ಕಡಿಮೆ ಎಂದು ಎಸ್‌ಎಂಎಫ್‌ಜಿ ಹಾಸನ ಶಾಖೆಯ ಮುಖ್ಯ ವ್ಯವಸ್ಥಾಪಕ ಚೇತನ್ ಕುಮಾರ್ ಹೇಳಿದರು.

ಅವರು ನಗರದ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿನಲ್ಲಿ ನಡೆದ ಬೃಹತ್ ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಮಾತನಾಡುತ್ತಾ, ಕ್ಯಾಂಪಸ್‌ನಲ್ಲಿ ಭಾಗವಹಿಸುತ್ತಿರುವಸಂಸ್ಥೆಯ ಬಗ್ಗೆ ತಿಳುವಳಿಕೆ ಇದ್ದಷ್ಟು ಸಂದರ್ಶನವನ್ನು ಎದುರಿಸಲು ಧೈರ್ಯ ಮತ್ತು ವಿಶ್ವಾಸ ಹೆಚ್ಚುತ್ತದೆ, ಅದರಿಂದ ಸುಲಭ ಯಶಸ್ಸನ್ನೂ ಸಾಧಿಸಬಹುದು ಎಂದರು. ಇದೇ ವೇಳೆ ಅವರು ಬ್ಯಾಂಕಿಂಗ್ ಸೆಕ್ಟರ್‌ಮತ್ತು ನಾನ್ ಬ್ಯಾಂಕಿಂಗ್ ಸೆಕ್ಟರ್‌ಗಳ ಬಗ್ಗೆ ವಿದ್ಯಾರ್ಥಿಗಳಿಗೆ ವಿವರವಾದ ಮಾಹಿತಿ ನೀಡಿದರು. 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡಿದ್ದ ಬೃಹತ್ ಜಾಬ್ ಮೇಳದಲ್ಲಿ ಪ್ರತಿಷ್ಠಿತ ಸಂಸ್ಥೆಗಳಾದ ಗೋಕುಲ್ದಾಸ್ ಎಕ್ಸ್‌ಪೋರ್ಟ್ ಪ್ರೈ. ಲಿ., ಎಸ್‌ಎಂಎಫ್‌ಜಿ,



ಎಸ್‌ಎಸ್‌ಪಿಎಂ ಪ್ರೈ. ಲಿ. ಮತ್ತು ಜೋಯಾಲುಕ್ಕಾಸ್ ಸೇರಿದಂತೆ ವಿವಿಧ ಸಂಸ್ಥೆಗಳು ಭಾಗವಹಿಸಿ ಲಿಖಿತ ಮತ್ತು ಮೌಖಿಕ ಪರೀಕ್ಷೆಯ ಮೂಲಕ ವಿದ್ಯಾರ್ಥಿಗಳನ್ನು ಸಂದರ್ಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದಕಾಲೇಜಿನಪ್ರಾಂಶುಪಾಲರಾದ ರಾಜು ಡಿ.ಎಸ್. ಅವರು ಖಾಸಗಿ ಮತ್ತು ಸರ್ಕಾರಿ ವಲಯದ ಮಧ್ಯೆ ಬಹಳಷ್ಟು ವ್ಯತ್ಯಾಸವಿದ್ದು, ಖಾಸಗೀ ವಲಯದಲ್ಲಿ ನಮ್ಮ ಅಸ್ತಿತ್ವವನ್ನು ಕಂಡುಕೊಳ್ಳಲು ಹೆಚ್ಚು ಶ್ರಮ ವಹಿಸಬೇಕಾಗುತ್ತದೆ. ಪ್ರತೀ ಕ್ಷಣ ನಮ್ಮನ್ನು ನಾವು ಅಪ್ಡೇಟ್ ಮಾಡಿಕೊಳ್ಳುವ ಮೂಲಕ ಪರಿಶ್ರಮ ಪಟ್ಟರೆ ಮಾತ್ರ ಉನ್ನತ ಮಟ್ಟ ತಲುಪಲು ಸಾಧ್ಯವಾಗುತ್ತದೆ ಎಂದು ಕಿವಿಮಾತು ಹೇಳಿದರು.

ಪದವಿ ವಿಭಾಗದ ಪ್ಲೇಸ್ಮೆಂಟ್ ಸೆಲ್ನ ಸಂಯೋಜಕರಾದ ಡಾ. ಸವಿತಾ ಅವರು ಮಾತನಾಡಿ, ಉದ್ಯೋಗಾಂಕ್ಷಿಗಳು ವಿದ್ಯಾರ್ಥಿ ದೆಸೆಯಲ್ಲಿಯೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗುವುದರಿಂದ ಯಶಸ್ಸು ಸಾಧ್ಯವಾಗುತ್ತದೆ. ವೃತ್ತಿ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳು ಪದವಿಯ ಜೊತೆಗೆ ಇಂಗ್ಲೀಷ್ ಸಂವಹನ ಮತ್ತು ಕೌಶಲ್ಯದ ಕಡೆಗೂ ಒತ್ತು ನೀಡಬೇಕಿದ್ದು, ಅಂಕಗಳ ಜೊತೆಗೆ ಜ್ಞಾನದ ಸಮನ್ವಯ ಅತೀ ಮುಖ್ಯ ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಶೈಕ್ಷಣಿಕ ಡೀನ್ ಡಾ. ಹರೀಶ್ ಎಂ.ಕೆ, ಪರೀಕ್ಷಾ ನಿಯಂತ್ರಕರಾದ ಡಾ. ಮುರಳೀಧರ್ ಕೆ.ಡಿ. ಸ್ನಾತಕೋತ್ತರ ವಿಭಾಗದ ಪ್ಲೇಸ್ಮೆಂಟ್ ಸೆಲ್ ಸಂಯೋಜಕಿ ಡಾ. ಶಾಂತ ಪಿ. ಆರ್. ಮತ್ತು ವಿವಿಧ ಕಂಪೆನಿಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಮಧ್ಯವರ್ತಿಗಳ ದೂರ ಇಟ್ಟು ನೇರವಾಗಿ ಸೌಲಭ್ಯ ಪಡೆಯಿರಿ

ಹೊಳೆನರಸೀಪುರ : ಕರ್ನಾಟಕ ಸರ್ಕಾರವು ಕಾರ್ಮಿಕರ ಅಭಿವೃದ್ಧಿಗಾಗಿ ಕೈಗೊಳ್ಳುವ ವಿವಿಧ ಯೋಜನೆಗಳು ಹಾಗೂ ಸೌಲಭ್ಯಗಳನ್ನು ಕಾರ್ಮಿಕ ಇಲಾಖೆಯಲ್ಲಿ ನೋಂದಣಿ ಮಾಡಿಸಿಕೊಂಡಿರುವ ಕಾರ್ಮಿಕರು ನೇರವಾಗಿ ಇಲಾಖೆ ಕಚೇರಿಗೆ ಭೇಟಿ ನೀಡುವ ಮೂಲಕ ಮಧ್ಯವರ್ತಿಗಳ ಹಾವಳಿಯಿಂದ ದೂರ ಸರಿದು ಸಕಾಲದಲ್ಲಿ ಪಡೆದುಕೊಂಡು ಸ್ವಾಭಿಮಾನದ ಉತ್ತಮ ಬದುಕು ರೂಪಿಸಿಕೊಳ್ಳುವಂತೆ ಕಾರ್ಮಿಕ ಇಲಾಖೆಯ ನಿರೀಕ್ಷಕಿ ಯಮುನಾ ತಿಳಿಸಿದರು.

ಪಟ್ಟಣದ ಡಾ. ಬಿ. ಆರ್. ಅಂಬೇಡ್ಕರ್ ನಗರದಲ್ಲಿ ಕಾರ್ಮಿಕರು ಆಯೋಜಿಸಿದ್ದ ಕಾರ್ಮಿಕ ದಿನಾಚರಣೆ ಮತ್ತು ಕಾನೂನು ಅರಿವು ಮತ್ತು ನೆರವು ಶಿಬಿರದ ಅಧ್ಯಕ್ಷತೆ ವಹಿಸಿ



ಮಾತನಾಡಿದರು. ಕಾರ್ಮಿಕ ಸೇತು, ಡಾ. ಬಿ. ಆರ್. ಅಂಬೇಡ್ಕರ್ ಸೇವಾ ಕೇಂದ್ರವನ್ನು ಆರಂಭಿಸಿದ್ದು, ಮೊಬೈಲ್ ನಲ್ಲಿ ಕಾರ್ಮಿಕರು ನೋಂದಣಿ ಸಲುವಾಗಿ ಅರ್ಜಿ ಸಲ್ಲಿಸುವುದರ ಜೊತೆಗೆ ಸಿಗುವ ಸವಲತ್ತು ಕುರಿತು ಖಾತರಿ ಮಾಡಿಕೊಳ್ಳಬಹುದು ಎಂದು ಮಾಹಿತಿ ನೀಡಿದರು.